ಸಂಪಾದಕರು: ದರ್ಶನ್.ಟಿ
Editor : DARSHAN.T

# ನಮ್ಮ ಜನ
# NAMMA JANA

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ –02 ಸಂಚಿಕೆ –222 | ಆರ್‌ಎನ್‌ಐ ನಂ: ಕೆಏಆರ್‌ಕೆಎಎನ್/2023/88462 | ಕೆಎ/ಎಸ್‌ಕೆ/ಸಿಟಿಎ–874/2024–2026 | ಚಿತ್ರದುರ್ಗ | ದಿನಾಂಕ: 25–03–2025 ಮಂಗಳವಾರ | ಪುಟ: 4 | ಬೆಲೆ : ರೂ.2–00
Volume - 02 Issue - 222 | RNI No: KARKAN/2023/88462 | KA/SK/CTA-874/2024-2026 | Chitradurga | Date: 25-03-2025 Tuesday | Page: 4 | Price: Rs. 2-00



ಒಳಪುಟದ ಸುದ್ದಿಗಳು
ಹೊಸದಾಗಿ ಕೆಲಸಕ್ಕೆ ಸೇರಿರುವ ಯುವ ಜನಾಂಗಕ್ಕೆ ಸಂಘಟನೆ ಬಗ್ಗೆ ಮಾಹಿತಿ ಇಲ್ಲ 2
ತಾಯಿ ಮರಣ, ಸಿಜೇರಿಯನ್ ಹೆರಿಗೆ ಪ್ರಮಾಣ ಹೆಚ್ಚಳಕ್ಕೆ ಸುಧಾಕರ್ ಕಳವಳ 3
ಮೆದೆಹಳ್ಳಿ ಗ್ರಾಪಂನಿಂದ ಶಾಸಕ ಕೆ.ಸಿ.ವೀರೇಂದ್ರಪಪ್ಪಿಗೆ ಸನ್ಮಾನ 4



ಸುದ್ದಿ, ಜಾಹಿರಾತಿಗೆ 9686622252


## ಫಾಸ್ಟ್ ನ್ಯೂಸ್

### ಗಾಂಧಿನಗರದ ಮಾರಮ್ಮದೇವಸ್ಥಾನದ ಬಳಿ ಹಾಡುಹಗಲೇ ಜೂಜಾಟ: ಆರು ಜನ ವಶ

» ಚಳ್ಳಕೆರೆ

ಚಳ್ಳಕೆರೆ ಠಾಣಾ ವ್ಯಾಪ್ತಿಯ ಗಾಂಧಿನಗರ ಮಾರಮ್ಮದೇವಸ್ಥಾನದ ಸಾರ್ವಜನಿಕ ರಸ್ತೆಯಲ್ಲಿ ಹಾಡುಹಗಲೇ ಜೂಜಾಟವಾಡುತ್ತಿದ್ದ ವೀರಭದ್ರಪ್ಪ ಇತರೆ ಐದು ಜನರನ್ನು ವಶಕ್ಕೆ ಪಡೆದ ಪೊಲೀಸರು ಅವರಿಂದ ಜೂಜಾಟದ ಹಣ 4500ರೂ ವಶಪಡಿಸಿಕೊಂಡಿದ್ದಾರೆ. ಸಾರ್ವಜನಿಕರ ಮಾಹಿತಿ ಮೇರೆಗೆ ಮುಖ್ಯಪೇದೆ ವಸಂತಕುಮಾರ್, ಜಗದೀಶ್, ಶಂಕರಣ್ಣ ಮತ್ತು ಸಿಬ್ಬಂದಿ ವರ್ಗ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿದಾಗ ಜೂಜಾಟವಾಡುತ್ತಿದ್ದು ಕಂಡುಬಂದಿದೆ. ಕೂಡಲೇ ಹಣ ಹಾಗೂ ಜೂಜುಕೋರರನ್ನು ವಶಕ್ಕೆ ಪಡೆದು ಪ್ರಕರಣ ದಾಖಲಿಸಿದ್ದಾರೆ.

### ತಾಲ್ಲೂಕಿನಾದ್ಯಂತ 2ನೇ ದಿನದ ಎಸ್‌ಎಸ್‌ಎಲ್‌ಸಿ ಪರೀಕ್ಷೆ ಮುಕ್ತಾಯ: 171 ವಿದ್ಯಾರ್ಥಿಗಳು ಗೈರು

» ಚಳ್ಳಕೆರೆ

ತಾಲ್ಲೂಕಿನಾದ್ಯಂತ ಎಸ್‌ಎಸ್‌ಎಲ್‌ಸಿ ಪರೀಕ್ಷೆಗಳು ಶಾಂತಿಯುತವಾಗಿ ನಡೆದಿದ್ದು, ಎರಡನೇ ದಿನವಾದ ಸೋಮವಾರ ಗಣಿತ ಭಾಷೆಯ ಪರೀಕ್ಷೆ ಇದ್ದು 171 ವಿದ್ಯಾರ್ಥಿಗಳು ಗೈರು ಹಾಜರಾಗಿದ್ದಾರೆಂದು ಕ್ಷೇತ್ರ ಶಿಕ್ಷಣಾಧಿಕಾರಿ ಕೆ.ಎಸ್.ಸುರೇಶ್ ತಿಳಿಸಿದ್ದಾರೆ. ಅವರು ಈ ಬಗ್ಗೆ ಮಾಹಿತಿ ನೀಡಿ 5141 ವಿದ್ಯಾರ್ಥಿಗಳು ಪರೀಕ್ಷೆ ಬರೆಯಲು ಅರ್ಹರಿದ್ದು ಆ ಪೈಕಿ 171 ವಿದ್ಯಾರ್ಥಿಗಳು ಗೈರಾಗಿದ್ದು 4970 ವಿದ್ಯಾರ್ಥಿಗಳು ಪರೀಕ್ಷೆ ಬರೆದಿರುತ್ತಾರೆ. ಎಲ್ಲಾ ಪರೀಕ್ಷಾ ಕೇಂದ್ರಗಳಲ್ಲಿ ಸೂಕ್ತಬಂದೋಬಸ್ತ್ ವ್ಯವಸ್ಥೆ ಕೈಗೊಳ್ಳಲಾಗಿತ್ತು. ಎಸ್‌ಎಸ್‌ಎಲ್‌ಸಿ ಪರೀಕ್ಷೆಗೆ ನಿಯೋಜನೆಗೊಂಡ ಜಿಲ್ಲಾ ನೋಡಲ್ ಅಧಿಕಾರಿ ಎನ್.ಆರ್.ತಿಪ್ಪೇಸ್ವಾಮಿ, ಜಿಲ್ಲಾ ಉಪಯೋಜನ ಸಮನ್ವಯಾಧಿಕಾರಿ ಸಿ.ಎಸ್.ವೆಂಕಟೇಶಪ್ಪ ಪರೀಕ್ಷಾ ಕೇಂದ್ರಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

### ಎಸ್‌ಎಸ್‌ಎಲ್‌ಸಿ ವಾರ್ಷಿಕ ಪರೀಕ್ಷೆ-1 ಗಣಿತ ವಿಷಯ: 1108 ವಿದ್ಯಾರ್ಥಿಗಳು ಗೈರು

» ಚಿತ್ರದುರ್ಗ

ಮಾರ್ಚ್ 24ರಂದು ನಡೆದ ಎಸ್‌ಎಸ್‌ಎಲ್‌ಸಿ ವಾರ್ಷಿಕ ಪರೀಕ್ಷೆ–1ರ ಗಣಿತ ವಿಷಯದ ಪರೀಕ್ಷೆಗೆ ಒಟ್ಟು 22,601 ವಿದ್ಯಾರ್ಥಿಗಳು ಹಾಜರಾಗಿದ್ದು, 1108 ವಿದ್ಯಾರ್ಥಿಗಳು ಗೈರಾಗಿದ್ದಾರೆ. ಜಿಲ್ಲೆಯಲ್ಲಿ ಗಣಿತ ವಿಷಯದ ಪರೀಕ್ಷೆಗೆ 23,709 ವಿದ್ಯಾರ್ಥಿಗಳು ನೋಂದಾಯಿಸಿಕೊಂಡಿದ್ದು, ಈ ಪೈಕಿ ಚಳ್ಳಕೆರೆ ತಾಲ್ಲೂಕಿನಲ್ಲಿ 4,970 ವಿದ್ಯಾರ್ಥಿಗಳು, ಚಿತ್ರದುರ್ಗ–6,442, ಹಿರಿಯೂರು–3,442, ಹೊಳಲ್ಕೆರೆ–2,625, ಹೊಸದುರ್ಗ–2,921 ಹಾಗೂ ಮೊಳಕಾಲ್ಮುರು–2,201 ವಿದ್ಯಾರ್ಥಿಗಳು ಸೇರಿದಂತೆ ಒಟ್ಟು 22,601 ವಿದ್ಯಾರ್ಥಿಗಳು ಹಾಜರಾಗಿ, 1108 ವಿದ್ಯಾರ್ಥಿಗಳು ಗೈರಾಗಿದ್ದಾರೆ. ಜಿಲ್ಲೆಯ 82 ಪರೀಕ್ಷೆ ಕೇಂದ್ರಗಳಲ್ಲಿ ಪರೀಕ್ಷೆ ನಡೆಯಿತು ಎಂದು ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಎಂ.ಆರ್.ಮಂಜುನಾಥ್ ತಿಳಿಸಿದ್ದಾರೆ.

### ಜೈನ್ ತಾಂತ್ರಿಕ ಮಹಾ ವಿದ್ಯಾಲಯದಲ್ಲಿ ರಕ್ತದಾನ

» ದಾವಣಗೆರೆ

ನಗರದ ಜೈನ್ ತಾಂತ್ರಿಕ ಮಹಾವಿದ್ಯಾಲಯದಲ್ಲಿ ರಾಷ್ಟ್ರೀಯ ಸೇವಾ ಯೋಜನೆಯ ಭಾಗವಾಗಿ ಲಯನ್ಸ್ ಬ್ಲಡ್ ಸೆಂಟರ್, ಎಚ್‌ಡಿಎಫ್‌ಸಿ ಬ್ಯಾಂಕ್ ಸಹಯೋಗದಲ್ಲಿ ಕರ್ನಾಟಕ ಸರ್ಕಾರದ ಅಡಿಯಲ್ಲಿ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ ಹಾಗು ಕಾರ್ಯಕರ್ತರು ಮತ್ತು ಕಲಾವಿದರ ರಾಷ್ಟ್ರೀಯ ಸಂಯೋಜಿತ ವೇದಿಕೆ ಈಚೆಗೆ ರಕ್ತದಾನ ಶಿಬಿರವನ್ನು ಆಯೋಜಿಸಲಾಗಿತ್ತು. ಶಿಬಿರವನ್ನು ಜೈನ್ ತಾಂತ್ರಿಕ ಮಹಾವಿದ್ಯಾಲಯದ ಪ್ರಾಂಶುಪಾಲ ಡಾ.ಡಿ.ಬಿ.ಗಣೇಶ್, ಲಯನ್ಸ್ ಕ್ಲಬ್ ದಾವಣಗೆರೆ ಅಧ್ಯಕ್ಷ ಎನ್.ಹೆಚ್.ಮೌನೇಶ್ವರ್, ಎಚ್.ಡಿ.ಎಫ್.ಸಿ ಬ್ಯಾಂಕ್ ವ್ಯವಸ್ಥಾಪಕ ಸಿದ್ದಲಿಂಗಸ್ವಾಮಿ ಉದ್ಘಾಟಿಸಿದರು. ವಿವಿಧ ವಿಭಾಗದ ಮುಖ್ಯಸ್ಥರು ಸಹ ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

## ದಿವ್ಯಾಂಗರ ಉಚಿತ ಸಾಧನ ಮತ್ತು ಸಲಕರಣೆಗಳ ವಿತರಣೆ

# ಸರ್ಕಾರ ಮಟ್ಟದಲ್ಲಿ ವಿಕಲಚೇತನರ ಮೀಸಲಾತಿ ಹೆಚ್ಚಳಕೆ ಚಿಂತನೆ: ಸಚಿವ ಡಿ.ಸುಧಾಕರ್ ಹೇಳಿಕೆ

» ಚಿತ್ರದುರ್ಗ

ವಿಕಲಚೇತನರಿಗೆ ಈಗ ನೀಡಿರುವ ಮೀಸಲಾತಿ ಪ್ರಮಾಣವನ್ನು ಹೆಚ್ಚಿಸುವ ಗಂಭೀರ ಚಿಂತನೆ ರಾಜ್ಯ ಸರ್ಕಾರದ ಮುಂದಿದೆ ಎಂದು ಯೋಜನೆ ಮತ್ತು ಸಾಂಖ್ಯಿಕ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಹೇಳಿದರು.

ಸೋಮವಾರ ನಗರದ ಸರ್ಕಾರಿ ವಿಜ್ಞಾನ ಕಾಲೇಜು ಮೈದಾನದಲ್ಲಿ ಭಾರತೀಯ ಸ್ಟೇಟ್ ಬ್ಯಾಂಕ್, ಭಾರತೀಯ ಕೃತಕ ಅಂಗಗಳ ಉತ್ಪಾದನಾ ನಿಗಮ (ಅಲಿಂಕೋ) ಹಾಗೂ ಜಿಲ್ಲಾಡಳಿತ ವತಿಯಿಂದ ಆಯೋಜಿಸಲಾದ ಸಿ.ಎಸ್.ಆರ್ ಹಾಗೂ ಅಡಿಪ್ ಯೋಜನೆಯಡಿ ದಿವ್ಯಾಂಗ ವ್ಯಕ್ತಿಗಳಿಗೆ ಉಚಿತ ಸಾಧನ ಮತ್ತು ಸಲಕರಣೆಗಳ ವಿತರಣೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ವಿಕಲಚೇತನರಿಗೆ ಹಲವಾರು ಯೋಜನೆಗಳನ್ನು ಸರ್ಕಾರದ ಮಟ್ಟದಲ್ಲಿ ಜಾರಿ ಮಾಡಲಾಗಿದೆ. ಇದರೊಂದಿಗೆ ಬ್ಯಾಂಕುಗಳು ಸಹ ವಿಕಲಚೇತನರು ಸ್ವ ಉದ್ಯೋಗ ಕೈಗೊಳ್ಳಲು ಸಾಲ ಸೌಲಭ್ಯಗಳನ್ನು ನೀಡಬೇಕು. ಸ್ವಾತಂತ್ರ್ಯ ನಂತರ ವಿಕಲಚೇತನರನ್ನು ಮುಖ್ಯವಾಹಿನಿಗೆ ತರುವ ಕೆಲಸಕ್ಕೆ ಮಾಜಿ ಪ್ರಧಾನಮಂತ್ರಿ ದಿವಂಗತ ಇಂದಿರಾಗಾಂಧಿ ಓಂಕಾರ ಹಾಕಿದರು. ವಿಕಲಚೇತನರಿಗೆ ಉದ್ಯೋಗದಲ್ಲಿ ಮೀಸಲಾತಿಯನ್ನು ಕಾಂಗ್ರೆಸ್ ಸರ್ಕಾರ ಒದಗಿಸಿತು. 108 ವಿಧದ ವಿಕಲಚೇತನರನ್ನು ಸರ್ಕಾರದಿಂದ ಗುರುತಿಸಲಾಗಿದೆ. ಇವರನ್ನು ಮುಖ್ಯವಾಹಿನಿಗೆ ತರಲು ಸಾರ್ವಜನಿಕರ ಬೆಂಬಲ ಅಗತ್ಯವಾಗಿದೆ ಎಂದು ಸಚಿವ ಡಿ.ಸುಧಾಕರ್ ಹೇಳಿದರು.

ಸಂಸದ ಗೋವಿಂದ ಎಂ.ಕಾರಜೋಳ ಮಾತನಾಡಿ, ಪ್ರಧಾನಿ ನರೇಂದ್ರ ಮೋದಿಯವರು 2014 ರಲ್ಲಿ ಮೊದಲ ಬಾರಿ ಅಧಿಕಾರಕ್ಕೆ ಬಂದ




ಸಂದರ್ಭದಲ್ಲಿ ವಿಕಲಾಂಗರು ಎನ್ನುವ ಪದವನ್ನು ಬದಲಿಸಿ, ದಿವ್ಯಾಂಗರು ಎನ್ನುವ ಪದವನ್ನು ಚಲಾವಣೆಗೆ ತಂದು ವಿಕಲಚೇತನರಿಗೆ ಗೌರವ ಸಲ್ಲಿಸಿ ಸಾಮಾಜಿಕ ಕಳಕಳಿ ಮೆರೆದರು. ಪದ ಬದಲಾವಣೆ ಮಾಡುವ ಜೊತೆಗೆ ಸಮಾಜದ ಮುಖ್ಯವಾಹಿನಿಗೆ ತರುವ ಕೆಲಸ ಹಾಗೂ ಗೌರವದಿಂದ ಬದುಕಲು ಯೋಜನೆಗಳನ್ನು ಜಾರಿಗೆ ತಂದಿದ್ದಾರೆ. ವಿಕಲಚೇತನರನ್ನು ಸಮಾಜದಲ್ಲಿ ಕೀಳಾಗಿ ನೋಡಬಾರದು.

ದಿವ್ಯಾಂಗರನ್ನು ಅಪ್ಪಿಕೊಂಡು ಪ್ರಗತಿ ಸಾಧಿಸಬೇಕು. ಭಾರತ ದೇಶ ದಿವ್ಯಾಂಗರನ್ನು ಹೊರತುಪಡಿಸಿ ಪ್ರಗತಿ ಕಾಣಲು ಸಾಧ್ಯವಿಲ್ಲ. ಇಂದು ಹಲವಾರು ದಿವ್ಯಾಂಗರು ಅಂತರಾಷ್ಟ್ರೀಯ ಕ್ರೀಡೆಗಳಲ್ಲಿ ದೇಶವನ್ನು ಪ್ರತಿನಿಧಿಸಿ ಪದಕ ತಂದು ಕೀರ್ತಿ ಗೌರವ ಹೆಚ್ಚು ಮಾಡಿದ್ದಾರೆ. ಈ ಹಿಂದೆ ದೇಶದಲ್ಲಿ 7 ರೀತಿಯ ಅಂಗವಿಕಲತೆಯನ್ನುಗುರುತಿಸಲಾಗುತ್ತಿತ್ತು. ಇದರಿಂದ ಉದ್ಯೋಗ ಹಾಗೂ ಉನ್ನತ ವಿದ್ಯಾಭ್ಯಾಸದಲ್ಲಿ ವಿಕಲಚೇತನರು ಸ್ಥಾನಗಳನ್ನು ಪಡೆಯುವಲ್ಲಿ ತೊಂದರೆಯಾಗುತ್ತಿತ್ತು. 2014 ರಲ್ಲಿ ವಿಕಲಚೇತನರ ಕಾಯ್ದೆಗೆ ತಿದ್ದುಪಡಿ ತಂದು 21 ತರಹದ ಅಂಗವಿಕಲತೆಯನ್ನು ಗುರುತಿಸಲಾಗಿದೆ. ಆಸಿಡ್ ದಾಳಿಗೆ ತುತ್ತಾದವರಿಗೆ ದಿವ್ಯಾಂಗರ ಪಟ್ಟಿ ಸೇರಿಸಿ ಸರ್ಕಾರಿ ಉದ್ಯೋಗದಲ್ಲಿ ಅವಕಾಶ ನೀಡಲಾಗಿದೆ. ಜಿಲ್ಲೆಯಲ್ಲಿ ಗಣಿ ಕಂಪನಿಗಳು ಸಹ ಸಾಮಾಜಿಕ ಹೊಣೆಗಾರಿಕೆ ನಿಧಿಯಡಿ ವಿಕಲಚೇತನರಿಗೆ ನೆರವು ನೀಡುವಂತೆ ಸಂಸದ ಗೋವಿಂದ ಎಂ ಕಾರಜೋಳ ಹೇಳಿದರು.

ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ ಅಧ್ಯಕ್ಷತೆ ವಹಿಸಿದ್ದರು. ಆಹಾರ ಮತ್ತು ನಾಗರೀಕ ಸರಬರಾಜು ನಿಗಮದ ಅಧ್ಯಕ್ಷರು ಹಾಗೂ ಹೊಸದುರ್ಗ ಶಾಸಕ ಬಿ.ಜಿ.ಗೋವಿಂದಪ್ಪ, ರಾಜ್ಯ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರು ಹಾಗೂ ಚಳ್ಳಕೆರೆ ಶಾಸಕ ಟಿ.ರಘುಮೂರ್ತಿ, ಹೊಳಲ್ಕೆರೆ ಶಾಸಕ ಡಾ.ಎಂ.ಚಂದ್ರಪ್ಪ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ತಾಜ್‌ಪೀರ್, ನಗರಸಭೆ ಅಧ್ಯಕ್ಷೆ ಬಿ.ಎನ್.ಸುಮಿತ ರಾಘವೇಂದ್ರ, ಜಿಲ್ಲಾ ಗ್ಯಾರಂಟಿ ಯೋಜನೆಗಳ ಪ್ರಾಧಿಕಾರದ ಅಧ್ಯಕ್ಷ ಆರ್.ಶಿವಣ್ಣ, ಉಪಾಧ್ಯಕ್ಷ ಡಿ.ಎನ್.ಮೈಲಾರಪ್ಪ, ಜಿಲ್ಲಾಧಿಕಾರಿ ವೆಂಕಟೇಶ್.ಟಿ, ಜಿ.ಪಂ. ಸಿಇಓ ಎಸ್.ಜೆ.ಸೋಮಶೇಖರ್, ಡಿಸಿಸಿ ಬ್ಯಾಂಕ್ ನಿರ್ದೇಶಕ ಗಿರೀಶ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕಿ ಭಾರತಿ ಬಣಕಾರ್, ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ಜೆ.ವೈಶಾಲಿ, ಎಸ್.ಬಿ.ಐ ಬ್ಯಾಂಕ್ ಪ್ರಾದೇಶಿಕ ವ್ಯವಸ್ಥಾಪಕ ಗಜೇಂದ್ರ ಕುಮಾರ್, ಇತರೆ ಶಾಖೆಗಳ ಮುಖ್ಯ ವ್ಯವಸ್ಥಾಪಕರುಗಳು ಸೇರಿದಂತೆ ಇತರೆ ಅಧಿಕಾರಿಗಳು ಉಪಸ್ಥಿತರಿದ್ದರು.

ಕೇಂದ್ರ ಸರ್ಕಾರದ ಅಡಿಪ್ ಯೋಜನೆಯಡಿ ರೂ.11,63,838 ಮೊತ್ತದ 263 ಸಾಧನ ಸಲಕರಣೆಗಳನ್ನು 140 ಫಲಾನುಭವಿಗಳಿಗೆ ಹಾಗೂ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾದ ಸಿ.ಎಸ್.ಆರ್ (ಸಾಮಾಜಿಕ ಹೊಣೆಗಾರಿಕೆ ಕಾರ್ಯನಿಧಿ) ಅನುದಾನದಡಿ ರೂ.44,72,198 ಮೊತ್ತದ 622 ಸಾಧನ ಸಲಕರಣೆಗಳನ್ನು 372 ಫಲಾನುಭವಿಗಳಿಗೆ ವಿತರಿಸಲಾಯಿತು. ಒಟ್ಟು512 ವಿಕಲಚೇತನ ಫಲಾನುಭವಿಗಳಿಗೆ ರೂ.56,36,036 ಮೊತ್ತದ 885 ಸಾಧನ ಸಲಕರಣೆಗಳನ್ನು ಈ ಸಂದರ್ಭದಲ್ಲಿ ವಿತರಿಸಲಾಯಿತು. 23 ಯಾಂತ್ರಿಕೃತ ಸೈಕಲ್, 34 ಟ್ರೈಸೈಕಲ್, 56 ವೀಲ್ ಚೇರ್, 96 ಮೊಣಕೈ ಊರುಗೋಲು, 64 ಕಂಕುಳ ಊರುಗೋಲು, 62 ವಾಕಿಂಗ್ ಸ್ಟಿಕ್, 6 ರೋಲೇಟರ್ಸ್, 12 ಸಿ.ಪಿ.ವೀಲ್ ಚೇರ್, 37 ಸುಗಮ್ಯ ಕೇನ್ಸ್, 426 ಬಿ.ಟಿ.ಇ ಶ್ರವಣ ಸಾಧನ, 65 ಪ್ರಾಸ್ಥೆಸಿಸ್ ಮತ್ತು ಕ್ಯಾಲಿಪರ್ಸ್, 3 ಸ್ಮಾರ್ಟ್ ಫೋನ್, 01 ಜಾಯ್ ಸ್ಟಿಕ್ ವೀಲ್ ಚೇರ್‌ನ್ನು ದಿವ್ಯಾಂಗರು ಪಡೆದುಕೊಂಡರು.

## ಪ್ರಮುಖ ಸುದ್ದಿ

# ಭರವಸೆಯ ಬೆಳಕು ಕಿರುಹೊತ್ತಿಗೆ ಬಿಡುಗಡೆ




■ ಜೆಪಿ ನ್ಯೂಸ್ ಚಿತ್ರದುರ್ಗ

ಕರ್ನಾಟಕ ರಾಜ್ಯ ಸರ್ಕಾರ ಜಾರಿಗೊಳಿಸಿರುವ ಪಂಚ ಗ್ಯಾರಂಟಿ ಯೋಜನೆಗಳ ಕುರಿತಂತೆ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಪ್ರಕಟಿಸಿರುವ ಭರವಸೆಯ ಬೆಳಕು– ಪಂಚ ಗ್ಯಾರಂಟಿ ಯೋಜನೆಗಳು ಕಿರುಹೊತ್ತಿಗೆಯನ್ನು ಯೋಜನೆ ಮತ್ತು ಸಾಂಖ್ಯಿಕ ಸಚಿವರೂ ಆದ ಜಿಲ್ಲಾ ಉಸ್ತುವಾರಿ ಸಚಿವ ಡಿ. ಸುಧಾಕರ್ ಅವರು ಬಿಡುಗಡೆ ಮಾಡಿದರು.

ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಸೋಮವಾರದಂದು ಏರ್ಪಡಿಸಲಾದ ತ್ರೈಮಾಸಿಕ ಕೆಡಿಪಿ ಪ್ರಗತಿ ಪರಿಶೀಲನಾ ಸಭೆಯಲ್ಲಿ ಭರವಸೆಯ ಬೆಳಕು– ಪಂಚ ಗ್ಯಾರಂಟಿ ಯೋಜನೆಗಳು ಕಿರುಹೊತ್ತಿಗೆಯನ್ನು ಜಿಲ್ಲಾ ಉಸ್ತುವಾರಿ ಸಚಿವರು ಬಿಡುಗಡೆ ಮಾಡಿದರು.

ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳಾದ ಅನ್ನಭಾಗ್ಯ, ಗೃಹಲಕ್ಷ್ಮಿ, ಗೃಹಜ್ಯೋತಿ, ಶಕ್ತಿ ಹಾಗೂ ಯುವನಿಧಿ ಯೋಜನೆಗಳು ರಾಜ್ಯದಲ್ಲಿ ಅಭೂತಪೂರ್ವ ಯಶಸ್ಸು ಕಂಡಿದ್ದು, ಯೋಜನೆಗಳು ಸರ್ವರಿಗೂ ಸಮಪಾಲು, ಸಾಮಾಜಿಕ ನ್ಯಾಯ ದೊರಕಿಸುವ ನಿಟ್ಟಿನಲ್ಲಿ ರಾಜ್ಯದ ಪ್ರತಿ ವರ್ಗಕ್ಕೂ ತಲುಪುತ್ತಿವೆ.

ರಾಜ್ಯದ ಪ್ರತಿಯೊಬ್ಬ ಪ್ರಜೆಯೂ ಒಂದಲ್ಲ ಒಂದು ರೀತಿಯಲ್ಲಿ ಗ್ಯಾರಂಟಿ ಯೋಜನೆಗಳ ಫಲಾನುಭವಿಯಾಗಿದ್ದಾರೆ. ಮುಖ್ಯಮಂತ್ರಿ ಸಿದ್ದರಾಮಯ್ಯನವರು, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ನೇತೃತ್ವದಲ್ಲಿ ಸರ್ಕಾರವು ದೀನ ದಲಿತರ ಹಾಗೂ ಬಡವರ ಶ್ರೇಯೋಭಿವೃದ್ಧಿಗಾಗಿ ನಿರಂತರ ಶ್ರಮಿಸುತ್ತಿದ್ದು, ಚುನಾವಣೆಗೂ ಮುನ್ನ ನೀಡಿದ್ದ ಭರವಸೆಗಳನ್ನು ಈಡೇರಿಸುವುದರೊಂದಿಗೆ ನಮ್ಮದು ನುಡಿದಂತೆ ನಡೆದ ಸರ್ಕಾರ ಎಂಬ ಹೆಗ್ಗಳಿಕೆಗೆ ಪಾತ್ರವಾಗಿದೆ ಎಂದುಜಿಲ್ಲಾಉಸ್ತುವಾರಿಸಚಿವರಾದಡಿ.ಸುಧಾಕರ್ ಅವರು ಕಿರುಹೊತ್ತಿಗೆಯ ತಮ್ಮ ಸಂದೇಶದಲ್ಲಿ ತಿಳಿಸಿದ್ದಾರೆ.ಪಂಚ ಗ್ಯಾರಂಟಿ ಯೋಜನೆಗಳಾದ ಅನ್ನಭಾಗ್ಯ, ಗೃಹಲಕ್ಷ್ಮಿ, ಗೃಹಜ್ಯೋತಿ, ಶಕ್ತಿ ಹಾಗೂ ಯುವನಿಧಿ ಯೋಜನೆಗಳ ಫಲಾನುಭವಿಗಳು, ಯೋಜನೆಗಳಿಂದ ತಮಗೆ ಆದ ಅನುಕೂಲ ಹಾಗೂ ಬದುಕಿಗೆ ನೆರವಾದ ಕುರಿತಂತೆ ಅನಿಸಿಕೆಗಳನ್ನು ವ್ಯಕ್ತಪಡಿಸಿದ್ದು, ಫಲಾನುಭವಿಗಳ ಅನಿಸಿಕೆಗಳು, ಮುಖ್ಯಮಂತ್ರಿ, ಉಪಮುಖ್ಯಮಂತ್ರಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರ ಸಂದೇಶವನ್ನು "ಭರವಸೆಯ ಬೆಳಕು– ಪಂಚ ಗ್ಯಾರಂಟಿ ಯೋಜನೆಗಳು' ಕಿರುಹೊತ್ತಿಗೆ ಒಳಗೊಂಡಿದೆ.

ಈ ಸಂದರ್ಭದಲ್ಲಿ ಶಾಸಕರುಗಳಾದ ಬಿ.ಜೆ. ಗೋವಿಂದಪ್ಪ, ಟಿ. ರಘುಮೂರ್ತಿ, ಎನ್.ವೈ. ಗೋಪಾಲಕೃಷ್ಣ, ಕೆ.ಸಿ. ವೀರೇಂದ್ರ ಪಪ್ಪಿ, ಡಾ. ಎಂ. ಚಂದ್ರಪ್ಪ, ಜಿಲ್ಲಾ ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷ ಆರ್. ಶಿವಣ್ಣ, ಜಿಲ್ಲಾಧಿಕಾರಿ ಟಿ. ವೆಂಕಟೇಶ್, ಜಿ.ಪಂ. ಸಿಇಓ ಎಸ್. ಜೆ. ಸೋಮಶೇಖರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರಂಜಿತ್ ಕುಮಾರ ಬಂಡಾರು ಮುಂತಾದವರು ಉಪಸ್ಥಿತರಿದ್ದರು.

# ಮಾದಿಗ ಸಮುದಾಯದ ಆಸ್ತಿ ರಕ್ಷಣೆ ಸರ್ಕಾರ ಹೊಣೆ

## ಶೋಷಿತ ಸಮುದಾಯಕ್ಕೆ ಅನ್ಯಾಯವಾದರೆ ಸಹಿಸಲು ಸಾಧ್ಯವಿಲ್ಲ: ಷಡಾಕ್ಷರ ಮುನಿಸ್ವಾಮೀಜಿ



» ಚಳ್ಳಕೆರೆ

ಕಳೆದ ಸುಮಾರು 65 ವರ್ಷಗಳ ಹಿಂದೆ ಶೋಷಿತ ಸಮುದಾಯದ ಹಿರಿಯ ಮುಖಂಡರು ಸಮಾಜದ ಅಭಿವೃದ್ಧಿ ಹಾಗೂ ಉತ್ತಮ ಜೀವನಕ್ಕಾಗಿ ಪುರಸಭೆಗೆ ಹಣಪಾವತಿಸಿ ಚರ್ಮಕುಶಲ ಕೈಗಾರಿಕೆ ಸಂಘಕ್ಕೆ ಜಾಗವನ್ನು ಪಡೆದಿದ್ದಾರೆ. ಆದರೆ, ಇತ್ತೀಚಿನ ದಿನಗಳಲ್ಲಿ ಈ ಜಾವನ್ನು ಕಬಳಿಸುವ ಹುನ್ನಾರ ನಡೆಯುತ್ತಿದೆ. ನ್ಯಾಯಾಲಯಕ್ಕೂ ಸಹ ಮನವಿ ಸಲ್ಲಿಸಲಾಗಿದೆ ಎಂದು ತಿಳಿದುಬಂದಿದೆ. ಆದರೆ, ಈ ಜಾಗವನ್ನು ಕಂದಾ ಇಲಾಖೆ ಹಾಗೂ ನಗರಸಭೆ ಯಾವುದೇ ಕಾರಣಕ್ಕೂ ಬೇರೆಯವರಿಗೆ ಪರಬಾರೆಮಾಡಿಕೊಡಬಾರದು. ಇದು ಮಾದಿಗ ಸಮುದಾಯದ ಸರ್ವತೋಮುಖ ಅಭಿವೃದ್ಧಿಗೆ ಮೀಸಲಿಡಬೇಕು. ಮುಂದಿನ ದಿನಗಳಲ್ಲಿ ಸರ್ಕಾರದಿಂದ ಅನುದಾನ ಪಡೆದು ಅಭಿವೃದ್ಧಿ ಪಡಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ಕೋಡಿಹಳ್ಳಿ ಶ್ರೀಆದಿಜಾಂಬವಪೀಠದ ಪೀಠಾಧ್ಯಕ್ಷರಾದ ಷಡಾಕ್ಷರಮುನಿಸ್ವಾಮೀಜಿ ತಿಳಿಸಿದರು. ಸಾವಿರಾರು ದಲಿತ ಕುಟುಂಬಗಳಿಗೆ ಆಸರೆಯಾದ ಈ ಜಮೀನನ್ನು ರಕ್ಷಣೆ ಮಾಡುವ ನಿಟ್ಟಿನಲ್ಲಿ ಜಿಲ್ಲಾ ಹಾಗೂ ತಾಲ್ಲೂಕು ಆಡಳಿತ ಎಚ್ಚರಿಕೆ ವಹಿಸಬೇಕಿದೆ. ಯಾವುದೇ ಸಂದರ್ಭದಲ್ಲಾದರೂ ದಲಿತ ಸಮುದಾಯದ ಸಂಘಟಿತವಾಗಿ ಹೋರಾಟ ನಡೆಸಿ ಆಸ್ತಿ ರಕ್ಷಣೆಗೆ ಮುಂದಾಗಬೇಕು. ನಮ್ಮ ಹಿರಿಯರು ಮಾಡಿದ ಆಸ್ತಿಯನ್ನು ನಾವೇ ರಕ್ಷಣೆ ಮಾಡದಿದ್ದರೆ ಮುಂದಿನ ಪೀಳಿಗೆ ಬದುಕುವುದಾದರೂ ಹೇಗೆ ಎಂದು ಪ್ರಶ್ನಿಸಿದರು.

## ಫಾಸ್ಟ್ ನ್ಯೂಸ್

### ಪುರುಷರಿಗೆ ಸಮಾನವಾಗಿ ಸಾಧನೆಗೈಯುತ್ತಿರುವ ಹೆಣ್ಣು ಅಬಲೆಯಲ್ಲ: ಸೌಭಾಗ್ಯ ಬಸವರಾಜನ್



» **ಚಿತ್ರದುರ್ಗ**

ಲ್ಲಾ ರಂಗದಲ್ಲಿಯೂ ಪುರುಷರಿಗೆ ಸಮಾನವಾಗಿ ಸಾಧನೆಗೈಯುತ್ತಿರುವ ಹೆಣ್ಣು ಅಬಲೆಯಲ್ಲ. ಸಬಲೆ ಎನ್ನುವುದನ್ನು ಸಾಬೀತುಪಡಿಸುತ್ತಿದ್ದಾಳೆಂದು ಜಿಲ್ಲಾ ಪಂಚಾಯಿತಿ ಮಾಜಿ ಅಧ್ಯಕ್ಷೆ ಸೌಭಾಗ್ಯ ಬಸವರಾಜನ್ ತಿಳಿಸಿದರು.ಚಿತ್ರ ಡಾನ್‌ಬೋಸ್ಕೋ ಸಭಾಂಗಣದಲ್ಲಿ ನಡೆದ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ ಉದ್ಘಾಟಿಸಿ ಮಾತನಾಡಿದರು. ಉತ್ಕೃಷ್ಟ ಸಮಾಜಕ್ಕಾಗಿ ಮಹಿಳಾ ಸಬಲೀರಕಣ ಎನ್ನುವ ವಿಚಾರ ಕುರಿತು ಮಾತನಾಡಿದ ಸೌಭಾಗ್ಯ ಬಸವರಾಜನ್ ಆರೋಗ್ಯಪೂರ್ಣ ಸಮಾಜ ನಿರ್ಮಾಣದಲ್ಲಿ ಮಹಿಳೆಯ ಪಾತ್ರ ಅಡಗಿದೆ. ಕೇವಲ ಮನೆಗಷ್ಟೆ ಮಹಿಳೆಯರು ಸೀಮಿತಗೊಳ್ಳದೆ ಸಮಾಜದ ಮುಖ್ಯವಾಹಿನಿಗೆ ಬಂದು ಸ್ವಾವಲಂಭಿಯಾಗಿ ಬದುಕು ಕಟ್ಟಿಕೊಂಡಾಗ ಆರ್ಥಿಕ, ಸಾಮಾಜಿಕ, ಶೈಕ್ಷಣಿಕ, ರಾಜಕೀಯವಾಗಿ ಅಭಿವೃದ್ದಿಯಾಗಲು ಸಾಧ್ಯ. ಸಮಾಜಮುಖಿ ಕೆಲಸಗಳ ಜೊತೆ ಚಿತ್ರಡಾನ್‌ಬೋಸ್ಕೋ ಮಹಿಳೆಯರ ಸಬಲೀಕರಣಕ್ಕಾಗಿ ಶ್ರಮಿಸುತ್ತಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.ಅಂತರಾಷ್ಟ್ರೀಯ ಮಹಿಳಾ ದಿನಾಚರಣೆಯ ಅಧ್ಯಕ್ಷತೆ ವಹಿಸಿದ್ದ ವಂದನೀಯ ಸ್ವಾಮಿ ಉದಯ್ ಮಾತನಾಡುತ್ತ ಮಹಿಳೆಯರು ತಮ್ಮಲ್ಲಿರುವ ಕೀಳರಿಮೆಯಿಂದ ಮೊದಲು ಹೊರ ಬರಬೇಕು. ಆಗ ಮಾತ್ರ ಎಲ್ಲಾ ರಂಗಗಳಲ್ಲಿ ಏನಾದರೂ ಸಾಧನೆ ಮಾಡಬಹುದು. ಶಿಕ್ಷಣಕ್ಕೆ ಹೆಚ್ಚಿನ ಒತ್ತು ಕೊಡಬೇಕೆಂದು ಕರೆ ನೀಡಿದರು.ಚಿತ್ರಡಾನ್‌ಬೋಸ್ಕೋ ನಿರ್ದೇಶಕ ಡಿ.ಸಿ.ಅಂಥೋನಿರಾಜ್ ಮಾತನಾಡಿ ಹೆಣ್ಣು ಸಮಾಜದ ಕಣ್ಣು, ಹೆಣ್ಣೊಂದು ಕಲಿತರೆ ಶಾಲೆಯೊಂದು ತೆರೆದಂತೆ. ಅದಕ್ಕಾಗಿ ಹೆಣ್ಣಾಗಿರುವುದಕ್ಕೆ ಹೆಮ್ಮೆ ಪಡೆಬೇಕು. ಹೆಣ್ಣು-ಗಂಡೆಂಬ ತಾರತಮ್ಯ ಸರಿಯಲ್ಲ. ಇಬ್ಬರನ್ನು ಸಮಾನತೆಯಿಂದ ನೋಡಬೇಕಿದೆ ಎಂದರು.

ಚಿತ್ರಡಾನ್‌ಬೋಸ್ಕೋ ಆಡಳಿತಾಧಿಕಾರಿ ವಿ.ಎಂ.ಮ್ಯಾಥ್ಯೂ, ಡಾನ್‌ಬೋಸ್ಕೋ ಸಂಸ್ಥೆಯ ಆಡಳಿತಾಧಿಕಾರಿ ಜಾನ್‌ಪೌಲ್, ಡಾನ್‌ಬೋಸ್ಕೊ ಪದವಿ ಕಾಲೇಜಿನ ಪ್ರಾಂಶುಪಾಲರಾದ ಬೆನ್ನಿ ಕ್ರಿಸ್ತದಾಸ್, ಡಾನ್‌ಬೋಸ್ಕೋ ಐ.ಸಿ.ಎಸ್.ಇ. ಶಾಲೆಯ ಪ್ರಾಚಾರ್ಯರಾದ ಕೆ.ಸಿ.ಮ್ಯಾಥ್ಯು, ಫ್ಯಾಪ್ಕೋ ಸೊಸೈಟಿಯ ನಿರ್ದೇಶಕಿ ಚಂದ್ರಕಲ, ಪ್ರಾಣಿ ಸಂರಕ್ಷಕಿ ಸ್ಪೂರ್ತಿ, ನಿಧಿಶ್ರಿ ಇನ್ನು ಅನೇಕರು ಅಂತರಾಷ್ಟ್ರೀಯ ಮಹಿಳಾ ದಿನಾಚರಣೆಯಲ್ಲಿದ್ದರು. ಮಣಿಪುರ ಸಾಂಸ್ಕೃತಿಕ ನೃತ್ಯ ಎಲ್ಲರ ಗಮನ ಸೆಳೆಯಿತು.

### ಶಿಕ್ಷಕ ರತ್ನ ಪ್ರಶಸ್ತಿ ಪುರಸ್ಕೃತೆ ಎಸ್.ಬಿ.ಶ್ವೇತಗೆ ಸನ್ಮಾನ



» **ಚಿತ್ರದುರ್ಗ**

ಸಂವಿಧಾನಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ಆಶಯದಂತೆ ಶಿಕ್ಷಣ, ಸಂಘಟನೆ, ಹೋರಾಟದಿಂದ ಮಾತ್ರ ಜೀವನದಲ್ಲಿ ಬದಲಾವಣೆ ಕಂಡುಕೊಳ್ಳಬಹುದೆಂದು ಮೊಳಕಾಲ್ಮುರು ತಾಲ್ಲೂಕು ಕೆ.ಕೆ.ಪುರ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಕರ್ನಾಟಕ ರಾಜ್ಯ ಗ್ರಾಮೀಣ ಶಿಕ್ಷಕ ರತ್ನ ಪ್ರಶಸ್ತಿ ಪುರಸ್ಕೃತೆ ಎಸ್.ಬಿ.ಶೋಭ ರೇವಣ್ಣ ಹೇಳಿದರು. ಚಿತ್ರದುರ್ಗ ಜಿಲ್ಲಾ ಮಾದಿಗ ನೌಕರರ ಸಾಂಸ್ಕೃತಿಕ ಸಂಘ, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಸಂಯುಕ್ತಾಶ್ರಯದಲ್ಲಿ ಜಿಲ್ಲಾ ಶಾಖೆ ಹಾಗೂ ತಾಲ್ಲೂಕು ಶಾಖೆಗಳಿಗೆ ನೂತನವಾಗಿ ಆಯ್ಕೆಯಾಗಿರುವ ಮಾದಿಗ ಸಮುದಾಯದ ಪದಾಧಿಕಾರಿಗಳಿಗೆ ಕ್ರೀಡಾ ಭವನದಲ್ಲಿ ಹಮ್ಮಿಕೊಳ್ಳಲಾಗಿದ್ದ ಅಭಿನಂದನಾ ಸಮಾರಂಭದಲ್ಲಿಸನ್ಮಾನಸ್ವೀಕರಿಸಿಮಾತನಾಡಿದರು. ಜಾತಿ ವ್ಯವಸ್ಥೆಯಲ್ಲಿ ವೃತ್ತಿ ಜೀವನದಲ್ಲಿ ಅನೇಕ ಎಡರು-ತೊಡರುಗಳನ್ನು ಅನುಭವಿಸಿದ್ದೇನೆ. ಮಾದಿಗ ಸಮುದಾಯದ ಮಕ್ಕಳಿಗೆ ಕಡ್ಡಾಯವಾಗಿ ಶಿಕ್ಷಣ ಕೊಟ್ಟಾಗ ಮತ್ರ ಅವಕಾಶಗಳು ಲಭಿಸಲು ಸಾಧ್ಯ ಎಂದರು. ಮಾದಿಗ ನೌಕರರ ಸಾಂಸ್ಕೃತಿಕ ಸಂಘದ ಗೌರವಾಧ್ಯಕ್ಷ ಕೆ.ಜಿ.ಜಗದೀಶ್ ಮಾತನಾಡಿ ಪರಿಶಿಷ್ಟ ಜಾತಿಯಲ್ಲಿ ಬಲಾಢ್ಯರ ನಡುವೆ ಮೀಸಲು ಕ್ಷೇತ್ರ ಸೌಲಭ್ಯ ಪಡೆಯಲು ವಿಫಲವಾಗಿರುವ ಮಾದಿಗ ಸಮುದಾಯಕ್ಕೆ ಒಳ ಮೀಸಲಾತಿ ಜಾರಿ ಅಗತ್ಯವಾಗಿದ್ದು, ಈ ನಿಟ್ಟಿನಲ್ಲಿ ಹೋರಾಟಕ್ಕೆ ಮಾದಿಗ ನೌಕರರ ಬೆಂಬಲ ಅತ್ಯಗತ್ಯ ಎಂದು ಹೇಳಿದರು. ಹೋರಾಟದಲ್ಲಿ ಮುಂಚೂಣಿಯಲ್ಲಿಲ್ಲದಿದ್ದರೂ ಹೋರಾಟಗಾರರಿಗೆ ಆತ್ಮಸ್ಥೈರ್ಯ ನೀಡಬೇಕೆಂದು ಮನವಿ ಮಾಡಿದರು. ಶಿಕ್ಷಣ ಇಲಾಖೆಯ ನಿವೃತ್ತ ಕಾರ್ಯದರ್ಶಿ ಎಂ.ರೇವಣಸಿದ್ದಪ್ಪ ಮಾತನಾಡಿ ಮಾದಿಗ ಜನಾಂಗ ಸಮಾಜದಲ್ಲಿ ತನ್ನ ತನ ಉಳಿಸಿಕೊಳ್ಳಬೇಕಾದರೆ ಎಲ್ಲರೂ ಒಗ್ಗಟ್ಟಾಗಿ ಒಳ ಮೀಸಲಾತಿ ಅನುಷ್ಠಾನ ಕುರಿತು ಚರ್ಚಿಸಿ ಜಾಗೃತಿ ಮೂಡಿಸಬೇಕಿದೆ ಎಂದರು.

# ಹೊಸದಾಗಿ ಕೆಲಸಕ್ಕೆ ಸೇರಿರುವ ಯುವ ಜನಾಂಗಕ್ಕೆ ಸಂಘಟನೆ ಏನು ಎಂಬುದರ ಬಗ್ಗೆ ಮಾಹಿತಿ ಇಲ್ಲ

» **ಚಿತ್ರದುರ್ಗ**

ಅಂಚೆ ಇಲಾಖೆಯಲ್ಲಿ ಹೊಸದಾಗಿ ಕೆಲಸಕ್ಕೆ ಸೇರಿರುವ ಯುವ ಜನಾಂಗಕ್ಕೆ ಸಂಘ ಎಂದರೆ ಏನು ಸಂಘಟನೆ ಎಂದರೆ ಏನು ಎಂಬುದರ ಬಗ್ಗೆ ಮಾಹಿತಿ ಇಲ್ಲ ನಮ್ಮ ಸಂಘದಲ್ಲಿನ ಹಿರಿಯರು ಸಂಘದ ಮತ್ತು ಸಂಘದ ಚಟುವಟಿಕೆಯ ಬಗ್ಗೆ ತಿಳಿಸಿ ಕೊಡುವುದರ ಮೂಲಕ ಅವರನ್ನು ಸಂಘಟನೆಗೆ ಬರಮಾಡಿಕೊಳ್ಳಬೇಕಿದೆ ಎಂದು ರಾಷ್ಟ್ರೀಯ ಅಂಚೆ ನೌಕರರ ಸಂಘದ ಕರ್ನಾಟಕ ವಲಯದ3ನೇ ವರ್ಗದ ವಲಯ ಕಾರ್ಯದರ್ಶಿಗಳಾದ ಖಂಡೋಜಿರಾವ್ ಕರೆ ನೀಡಿದರು.



ರಾಷ್ಟ್ರೀಯ ಅಂಚೆ ನೌಕರರ ಸಂಘ ಮೂರನೇ ವರ್ಗ, ಪೋಸ್ಟ್‌ಮೆನ್ & ಎಂಟಿಎಸ್ ಮತ್ತು ಗ್ರಾಮೀಣ ಅಂಚೆ ನೌಕರರ ಸಂಘದ ಚಿತ್ರದುರ್ಗ ವಿಭಾಗದವತಿಯಿಂದ ಭಾನುವಾರ ನಗರದ ತರಾಸು ರಂಗಮಂದಿರದಲ್ಲಿ ನಡೆದ 35ನೇ ಜಂಟಿ ದೈವಾರ್ಷಿಕ ಸಮ್ಮೇಳನದಲ್ಲಿ ಭಾಗವಹಿಸಿ ಮಾತನಾಡಿದ ಅವರು, ನಮ್ಮ ಕಾಲದಲ್ಲಿ ಸರ್ಕಾರದವತಿಯಿಂದ ಏನಾದರೂ ಸೌಲಭ್ಯ ಪಡೆಯಬೇಕಾದರೆ ಸಂಘ ಅಗತ್ಯವಾಗಿತ್ತು ಇದರ ಮೂಲಕವೇ ಸರ್ಕಾರಕ್ಕೆ ಆಗ್ರಹವನ್ನು ಮಾಡಲಾಗುತ್ತಿತ್ತು, ಇದ್ದಲ್ಲದೆ ನಮ್ಮ ನೌಕರರ ವಿರುದ್ದ ಸರ್ಕಾರ ಏನಾದರೂ ಆದೇಶವನ್ನು ಹೂರಡಿಸಿದರೆ ಅದರ ವಿರುದ್ದವೂ ಸಹಾ ಸಂಘದ ಮೂಲಕ ಹೋರಾಟವನ್ನು ಮಾಡುವುದರ ಮೂಲಕ ಅ ಆದೇಶವನ್ನು ಹಿಂಪಡೆ ಯುವವರೆಗೂ ಹೋರಾಟವನ್ನು ಮಾಡಲಾಗುತ್ತಿತ್ತು ಆ ದಿನಮಾನದಲ್ಲಿ ಸಂಘ, ಸಂಘಟನೆ ಎಂದರೆ ಸರ್ಕಾರವಾಗಲಿ, ಆಡಳಿತ ಮಂಡಳಿಯಾಗಲಿ ಗೌರವವನ್ನು ನೀಡುವುದರ ಮೂಲಕ ನಮ್ಮ ಮನವಿಗೆ ಸ್ಪಂದಿಸುತ್ತಿತ್ತು ಎಂದರು. ನಮ್ಮ ಕಾಲದಲ್ಲಿ ಸಂಘಟನೆಯನ್ನು ಮಾಡುವುದಕ್ಕಾಗಿ ರಾಜ್ಯವ್ಯಾಪ್ತಿ ಪ್ರವಾಸವನ್ನು ಮಾಡುವುದರ ಮೂಲಕ ಸಂಘಟನೆಯನ್ನು ಮಾಡಲಾಗುತ್ತಿತ್ತು ಇದ್ದಲ್ಲದೆ ಜಿಲ್ಲಾವಾರು ಸಮ್ಮೇಳನವನ್ನು ಮಾಡುವುದರ ಮೂಲಕ ಸಂಘಟನೆಯನ್ನು ಮಾಡಲಾಗುತ್ತಿತ್ತು ಈ ರೀತಿಯಾದ ಸಮ್ಮೇಳನವನ್ನು ಮಾಡಿದಾಗ ಸಾವಿರಾರು ಸಂಖ್ಯೆಯಲ್ಲಿ ಸಿಬ್ಬಂದ್ದಿಗಳು ಭಾಗವಹಿಸುತ್ತಿದ್ದರು. ಆದರೆ ಇಂದಿನ ದಿನಮಾನದಲ್ಲಿ ಇಲಾಖೆಗೆ ಹೊಸದಾಗಿ ಕೆಲಸಕ್ಕೆ ಸೇರಿರುವ ಯುವ ಜನತೆಗೆ ಸಂಘ, ಸಂಘಟನೆ ಎಂದರೆ ಏನು ಎಂಬುದರ ಬಗ್ಗೆ ತಿಳಿದಿಲ್ಲ, ಸಂಘ ಎಂದರೆ ಏನು ಎಂದು ಪ್ರಶ್ನೆ ಮಾಡಿ ಅದರಿಂದ ಏನು ಉಪಯೋಗ ಎನ್ನುತ್ತಿದ್ದಾರೆ ಆದರೆ ಕೆಲಸದಲ್ಲಿ ಏನಾದರೂ ತೊಂದರೆಯಾದಾಗ ಸಂಘದ ಮೂಲಕ ಹೊಂದರೆ ಸಮಸ್ಯೆಯನ್ನು ಶೀಘ್ರವಾಗಿ ಇತ್ಯರ್ಥ ಮಾಡಲು ಸಾಧ್ಯವಾಗುತ್ತದೆ ಎಂಬ ಅರಿವು ಇಲ್ಲದಾಗಿದೆ ಎಂದು ಬೇಸರ ವ್ಯಕ್ತಪಡಿಸಿದರು.

ಸಮಾಜ ಸೇವಕರಾದ ಶ್ರೀಮತಿ ವೀಣಾ ಮಾತನಾಡಿ, ಚಿತ್ರದುರ್ಗದಲ್ಲಿ ಒಳ್ಳೆಯ ಸಂಘಟನೆ ಇದೆ. ಇದರಿಂದ ನಿಮ್ಮ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಿ, ನಿಮ್ಮ ಸಂಘದಲ್ಲಿನ ಸದಸ್ಯರಿಗೆ ಉತ್ತಮವಾದ ಸೌಲಭ್ಯವನ್ನು ನೀಡಿ, ಮಕ್ಕಳ ಶಿಕ್ಷಣಕ್ಕೆ ಸಹಾಯವನ್ನು ಮಾಡಿ, ವ್ಯವಹಾರವನ್ನು ಮಾಡುವವರಿಗೆ ಸಾಲದ ರೂಪದಲ್ಲಿ ಸಹಾಯವನ್ನು ಮಾಡುವುದರ ಮೂಲಕ ಅವರ ಆರ್ಥಿಕ ಪ್ರಗತಿಗೆ ಕಾರಣರಾಗಿ ಎಂದು ಕರೆ ನೀಡಿದರು.

ಅಂಚೆ ಅಧೀಕ್ಷಕರಾದ ಕೆ.ಆರ್. ಉಷಾ ದೈವಾರ್ಷಿಕ ಸಮ್ಮೇಳನವನ್ನು ಉದ್ಘಾಟನೆ ಮಾಡಿದರು. ರಾಷ್ಟ್ರೀಯ ಅಂಚೆ ನೌಕರರ ಸಂಘ, 3ನೇ ವರ್ಗ, ಅಧ್ಯಕ್ಷರಾದ ಟಿ.ಎಸ್.ಶಿವಮೂರ್ತಪ್ಪ ಅಧ್ಯಕ್ಷತೆಯನ್ನು ವಹಿಸಿದ್ದರು. 4ನೇ ವರ್ಗದ ಅಧ್ಯಕ್ಷರಾದ ಸತೀಶ್ ಸಹಾಯಕ ಜನರಲ್ ಸೆಕ್ರೆಟರಿ ಹೆಚ್, ಚಿತ್ರಶೇಖರ್, ಅಧ್ಯಕ್ಷರಾದ ಕೆ.ಟಿ. ತಿಮ್ಮಾರೆಡ್ಡಿ (ಕರೀಕೆರೆ) ರಾಷ್ಟ್ರೀಯ ಅಂಚೆ ನೌಕರರ ಸಂಘದ ವಲಯ ಕಾರ್ಯದರ್ಶಿ ಎಂ.ಪಿ. ಚಿತ್ರಸೇನ, 4ನೇ ವರ್ಗದ ಕರ್ನಾಟಕ ವಲಯದ ಸಂಘಟನಾ ಕಾರ್ಯದರ್ಶಿ, ಮೈಲನಹಳ್ಳಿ ನಾಗರಾಜ್. ಎಂ.ಐ. ವಿಭಾಗೀಯ ಕಾರ್ಯದರ್ಶಿ ಎನ್.ಎ.ಶ್ರೀನಿವಾಸ್, ಸಹ ಕಾರ್ಯದರ್ಶಿ ಮಾರುತಿ ಆರ್, ಖಂಜಾಚಿ ರಾಜೇಶ್ವರಿ ಟಿ., ರಾಷ್ಟ್ರೀಯ ಅಂಚೆ ನೌಕರರ ಸಂಘದ ಅಧ್ಯಕ್ಷರಾದ ಮಂಜುನಾಥ್, ಕಾರ್ಯದರ್ಶಿ ಪ್ರೇಮ ಕುಮಾರ್ ಚಾರಿ, ಸಹ ಕಾರ್ಯದರ್ಶಿ ಶಶಿಕಾಂತ ಯಾದವ್, ಖಂಜಾಚಿ ಶ್ರೀನಿವಾಸ್ ಮೂರ್ತಿ, ಗ್ರಾಮೀಣ ಅಂಚೇ ನೌಕರರ ಸಂಘದ ಅಧ್ಯಕ್ಷರಾದ ಅಜಯ್ ಕುಮಾರ್, ಕಾರ್ಯದರ್ಶಿ ಪಾಂಡುರಂಗರೆಡ್ಡಿ, ಸಹ ಕಾರ್ಯದರ್ಶಿ ನಂದಿನಿ, ಖಂಜಾಚಿ ರಾಜು ಭಾಗವಹಿಸಿದ್ದರು.

ಈ ಸಮ್ಮೇಳನದಲ್ಲಿ ಇಲಾಖೆಯಲ್ಲಿ ಸೇವೆ ಸಲ್ಲಿಸಿ ನಿವೃತ್ತಿ ಹೊಂದಿದ ನೌಕರರಿಗೆ ಹಾಗೂ 2023-24 ನೇ ಇಸವಿಯಲ್ಲಿ ಇಲಾಖಾ ಪರೀಕ್ಷೆಯಲ್ಲಿ ಉತ್ತೀರ್ಣರಾಗಿ ಬಡ್ತಿ ಹೊಂದಿದ ನೌಕರರನ್ನು ಸನ್ಮಾನಿಸಲಾಯಿತು.

# ಚಿತ್ರದುರ್ಗದಲ್ಲಿ ಮದಕರಿ ನಾಯಕ ಥೀಮ್ ಪಾರ್ಕ್ ಮಾಡುವಂತೆ ಸಚಿವರಿಗೆ ಮನವಿ

» **ಚಿತ್ರದುರ್ಗ**

ದುರ್ಗದ ಜನರ ಹಾಗೂ ಸಮುದಾಯದ ಒತ್ತಾಸೆಯಂತೆ ಚಿತ್ರದುರ್ಗದಲ್ಲಿ ಸರ್ಕಾರದವತಿಯಿಂದ ರಾಜಾ ವೀರ ಮದಕರಿ ನಾಯಕರ ಥೀಮ್ ಪಾರ್ಕ್ ಮಾಡಬೇಕು ಎಂದು ಮಹರ್ಷಿ ವಾಲ್ಮಿಕಿ ಗುರುಪೀಠದ ಶ್ರೀ ವಾಲ್ಮಿಕಿ ಪ್ರಸನ್ನಾನಂದ ಸ್ವಾಮೀಜಿ ಸರ್ಕಾರವನ್ನು ಒತ್ತಾಯಿಸಿದ್ದಾರೆ.



ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಅವರಿಗೆ ಪ್ರವಾಸಿ ಮಂದಿರದಲ್ಲಿ ಸೋಮವಾರ ಈ ಕುರಿತು ಮನವಿ ಸಲ್ಲಿಸಿರುವ ಸ್ವಾಮೀಜಿ, ರಾಜಾ ವೀರ ಮದಕರಿ ನಾಯಕರ ಥೀಮ್ ಪಾರ್ಕ ಮಾಡುತ್ತೇವೆಂದು ಕೇಂದ್ರ ಸರ್ಕಾರ ಘೋಷಣೆ ಮಾಡಿತ್ತು ಆದರೆ ಇದುವರೆಗೂ ಅದು ಈಡೇರಿಲ್ಲ ಆದ್ದರಿಂದ ತಮ್ಮ ಸರ್ಕಾರದ ಅವಧಿಯಲ್ಲಿ ಥೀಮ್ ಪಾರ್ಕ ಮಾಡಬೇಕು. ಚಿತ್ರದುರ್ಗವನ್ನು ಆಳಿದ ರಾಜಾ ಮತ್ತಿ ತಿಮ್ಮಣ್ಣನಾಯಕರಿಂದ ಕೊನೆ ರಾಜಾವೀರ ಮದಕರಿನಾಯಕರವರೆಗೆ ಈ ನಾಡಿಗೆ ತನ್ನದೇ ಆದ ಕೊಡುಗೆ ನೀಡಿದ್ದಾರೆ ಇವರ ಕಾಲದಲ್ಲಿ ಈ ನಾಡು ಸುವರ್ಣಯುಗವಾಗಿದೆ ಎಂದು ಅನೇಕ ಇತಿಹಾಸಗಾರರು ತಿಳಿಸಿದ್ದಾರೆ ಹಾಗಾಗಿ ಈ ನಾಡಿಗೆ ತನ್ನದೇ ಆದ ಸಂಸ್ಕೃತಿ ಗೌರವವಿದೆ. ಅದನ್ನು ಉಳಿಸಲು ಮುಂದಿನ ಪೀಳಿಗೆಗೆ ಪರಿಚಹಿಸಲು ಸರ್ಕಾರದ ವತಿಯಿಂದ ದುರ್ಗೋತ್ಸೋವ ಕಾರ್ಯಕ್ರಮ ಆಚರಿಸಬೇಕು. ಜಿಲ್ಲೆಯಲ್ಲಿ ಅತಿ ಹೆಚ್ಚು ಬುಡಕಟ್ಟು ಸಮುದಾಯವನ್ನು ಹೊಂದಿದ್ದು ಚಿತ್ರದುರ್ಗದಲ್ಲಿ ಬುಡಕಟ್ಟು ವಿಶ್ವವಿದ್ಯಾಲಯ ಸ್ಥಾಪಿಸಬೇಕು. ಈಗಾಗಲೇ ಮುಖ್ಯಮಂತ್ರಿಗಳಿಗೆ ಮನವಿಯನ್ನು ಕೂಡ ಸಲ್ಲಿಸಲಾಗಿದೆ ಆದ್ದರಿಂದ ತಾವು ಸರ್ಕಾರದ ಗಮನಕ್ಕೆ ತಂದು ಬುಡಕಟ್ಟು ವಿಶ್ವ ವಿದ್ಯಾಲಯ ಸ್ಥಾಪಿಸಬೇಕೆಂದು ಸಮುದಾಯದ ಒತ್ತಾಸೆಯಾಗಿದೆ ಎಂದು ಮನವಿ ಮಾಡಿದ್ದಾರೆ.

ಈ ಸಂದರ್ಭದಲ್ಲಿ ಶಾಸಕರುಗಳಾದ ಎಂ.ಚಂದ್ರಪ್ಪ, ರಘುಮೂರ್ತಿ, ಬಿ.ಜಿ.ಗೋವಿಂದಪ್ಪ ಕೆ.ಸಿ.ವಿರೇಂದ್ರ ಪಪ್ಪಿ, ಜಿಲ್ಲಾ ನಾಯಕ ಸಂಘದ ಅಧ್ಯಕ್ಷರಾದ ಹೆಚ್. ಜೆ.ಕೃಷ್ಣಮೂರ್ತಿ, ನಗರಸಭಾ ಸದಸ್ಯರಾದ ವೆಂಕಟೇಶ್ ಸೇರಿದಂತೆ ಇತರರು ಉಪಸ್ಥಿತರಿದ್ದರು.



ಮಾನವ ಹಕ್ಕುಗಳ ಕುರಿತು ಪ್ರವಾಸಿ ಮಂದಿರದಲ್ಲಿ ನಡೆದ ಉಪನ್ಯಾಸದಲ್ಲಿ ಡಾ.ಜ್ಞಾನಪ್ರಕಾಶ್ ಮಾತನಾಡಿದರು.

# ಮಾದಿಗ ಸಮುದಾಯದ ಆಸ್ತಿ ರಕ್ಷಣೆ ಸರ್ಕಾರ ಹೊಣೆ

» **ಮೊದಲ ಪುಟದಿಂದ**

ಅವರು, ಸೋಮವಾರ ತಾಲ್ಲೂಕು ಕಚೇರಿ ಮುಂಭಾಗದಲ್ಲಿ ಮಾದಿಗ ಮಹಾಸಭಾ ಮತ್ತು ದಲಿತ ಸಂಘಟನೆಗಳ ಸಂಯುಕ್ತಾಶ್ರಯದಲ್ಲಿ ಮಾದಿಗ ಸಮುದಾಯದ ಆಸ್ತಿ ರಕ್ಷಣೆ ಹಾಗೂ ದೌರ್ಜನ್ಯ ನಿಯಂತ್ರಿಸುವ ನಿಟ್ಟಿನಲ್ಲಿ ಹಮ್ಮಿಕೊಂಡಿದ್ದ ಧರಣಿಸತ್ಯಾಗ್ರಹದಲ್ಲಿ ಪಾಲ್ಗೊಂಡು ತಹಶೀಲ್ದಾರ್ ರೇಹಾನ್‌ಪಾಷಗೆ ಮನವಿ ಅರ್ಪಿಸಿ ಮಾತನಾಡಿದರು. ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ಸಮಾಜದ ಪ್ರತಿಯೊಂದು ವರ್ಗವೂ ಸಮಾನತೆಯಿಂದ ಬದುಕನ್ನು ರೂಪಿಸಿಕೊಳ್ಳಬೇಕೆಂದು ಹೇಳಿದ್ದಾರೆ. ರಾಜ್ಯದ ಯಾವುದೇ ಪ್ರದೇಶದಲ್ಲಿ ದಲಿತ ಸಮುದಾಯ ಬೇರೆಯವರ ಆಸ್ತಿಯನ್ನು ಪಡೆಯುವ ಯತ್ನ ನಡೆಸಿಲ್ಲ. ಆದರೂ ಇಲ್ಲಿ 65 ವರ್ಷಗಳ ಹಿಂದೆ ಪಡೆದ ಆಸ್ತಿಯ ಬಗ್ಗೆ ಕೆಲವೊಂದು ಶಕ್ತಿಗಳು ತಕರಾರು ಮಾಡುತ್ತಿರುವುದು ಸರಿಯಲ್ಲ, ಸಮಯ ಬಂದರೆ ಇದಕ್ಕೆ ತಕ್ಕಉತ್ತರವನ್ನು ನೀಡಬೇಕಾಗುತ್ತದೆ ಎಂದು ಎಚ್ಚರಿಸಿದರು.

ಜಿಲ್ಲಾಧಿಕಾರಿಗಳು, ತಹಶೀಲ್ದಾರ್ ಹಾಗೂ ಪೌರಾಯುಕ್ತರು ದಾಖಲಾತಿಗಳನ್ನು ನೋಡಿಯಾದರೂ ಇಂತಹ ಹುನ್ನಾರಕ್ಕೆ ತಕ್ಕ ಉತ್ತರ ನೀಡಬೇಕು, ದಲಿತ ಸಮುದಾಯ ಇನ್ನೂ ಶೋಷಣೆಯ ಕತ್ತಲಲ್ಲೇ ಮುಳುಗಿದೆ. ಬೆಳಕನ್ನು ಕಾಣಬೇಕೆಂಬ ಈ ಸಮುದಾಯದ ಹಂಬಲಕ್ಕೆ ಅಡ್ಡಿಉಂಟಾಗುತ್ತಿರುವುದು ಇಂತಹ ಶಕ್ತಿಗಳಿಂದ. ಆದ್ದರಿಂದ ದಲಿತ ಸಮುದಾಯದ ಎಲ್ಲಾ ಸಂಘಟನೆಗಳು ಸಂಘಟಿತವಾಗಿ ಸಮಾಜದ ಏಳಿಗಾಗಿ ಕಂಕಣಬದ್ದವಾಗಿ ಹೋರಾಟ ನಡೆಸಬೇಕೆಂದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಮಾದಿಗ ಮಹಾಸಭಾದ ಜಿಲ್ಲಾಧ್ಯಕ್ಷ ಎಂ.ಶಿವಮೂರ್ತಿ, 60ರ ದಶಕದಲ್ಲೇ ರಿಸರ್ವೆ ನಂ. 240ರಲ್ಲಿ 4 ಎಕರೆ ಜಮೀನನ್ನು ಮಾದಿಗ ಜನಾಂಗದ ಚರ್ಮದ ಕುಶಲ ಕೈಗಾರಿಕೆ ಸಹಕಾರ ಸಂಘಕ್ಕೆ ನೀಡಲಾಗಿತ್ತು. ಎಲ್ಲಾ ದಾಖಲಾತಿಗಳು ಲಭ್ಯವಿದ್ದರೂ ಸಹ ಇಲ್ಲಿನ ನಗರಸಭೆ ಹಾಗೂ ತಾಲ್ಲೂಕು ಆಡಳಿತ ಸೂಕ್ತ ಕ್ರಮಕೈಗೊಳ್ಳುವಲ್ಲಿ ವಿಫಲವಾಗಿದೆ. ಇದಕ್ಕೆ ಸಂಬಂಧವಿಲ್ಲದವರು ನ್ಯಾಯಾಲಯದ ಮೊರೆಹೋಗುತ್ತಾರೆ ಎಂದರೆ ಏನು ಅರ್ಥ. 1981ರಲ್ಲಿ ತಾಲ್ಲೂಕು ಕಚೇರಿ ಮುಂಭಾಗದಲ್ಲಿ 1981ರಲ್ಲಿ 30*40 ಅಳತೆಯ ನಿವೇಶನವನ್ನು ಮಾದಿಗ ಜನಾಂಗಕ್ಕೆ ನೀಡಿದ್ದು, ಅದನ್ನು ಜನಾಂಗಕ್ಕೆ ಮೀಸಲಿಡಬೇಕೆಂದು ಒತ್ತಾಯಿಸಿದರು. ಇತ್ತೀಚಿನ ದಿನಗಳಲ್ಲಿ ತಾಲ್ಲೂಕಿನಾದ್ಯಂತ ದಲಿತ ಮೇರೆ ದೌರ್ಜನ್ಯಗಳು ಹೆಚ್ಚುತ್ತಿದ್ದು, ತಾಲ್ಲೂಕು ಆಡಳಿತ ನಿಯಂತ್ರಿಸಬೇಕು ಎಂದರು.

ಮನವಿ ಸ್ವೀಕರಿಸಿದ ತಹಶೀಲ್ದಾರ್ ರೇಹಾನ್‌ಪಾಷ ಈಗಾಗಲೇ ಜಿಲ್ಲಾಧಿಕಾರಿಗಳು ಮಾಹಿತಿ ನೀಡಿದ್ದು, ಯಾವುದೇ ಕಾರಣಕ್ಕೂ ಈ ಜಮೀನು ಬೇರೆಯವರಿಗೆ ಪರಬಾರೆಯಾಗಲು ಅವಕಾಶವಿಲ್ಲ. ಮಾದಿಗ ಸಮುದಾಯದ ಬಂಧುಗಳು ತಾಲ್ಲೂಕು ಆಡಳಿತಕ್ಕೆ ಸಹಕರಿಸಿ ನಿಮ್ಮ ಆಸ್ತಿ ರಕ್ಷಣೆ ಸರ್ಕಾರದ ಜವಾಬ್ದಾರಿ ಎಂದರು.

## ಪ್ರಮುಖ ಸುದ್ದಿ

# ಹರೆನಹಳ್ಳಿ, ಮೇಕೆನಹಟ್ಟಿಯಲ್ಲಿ ಬೋನಿಗೆ ಬಿದ್ದ ಚಿರತೆ

» **ಎಸ್.ವೇದಮೂರ್ತಿ ಹೊಳಲ್ಕೆರೆ**

ಬೇಸಿಗೆ ಬಿಸಿಲು ಹೆಚ್ಚುದಂತೆ ವನ್ಯ ಮೃಗಗಳಾದ ಕರಡಿ, ಚಿರತೆ, ನರಿಗಳು, ಹಾವುಗಳು ಆಹಾರಕ್ಕಾಗಿ ಅಲೆಯುತ್ತಾ ಅರಣ್ಯ ಪ್ರದೇಶದ ಹಂಚಿನ ಹಳ್ಳೀಗಳಿಗೆ ಲಗ್ಗೆ ಹಾಕುತ್ತಿದೆ. ಇನ್ನು ಚಿಂಚಿತಜ ಹಳ್ಳಿಯಲ್ಲಿನ ಶ್ವಾನಗಳ ಬೇಟೆ ಶುರುಮಾಡಿವೆ. ಇದು ಹಳ್ಳಿ ನಾಗರಿಕ ಜೀವಕ್ಕೆ ಕುತ್ತು ತರುವ ಅಂತಕದ ವಾತವರಣ ಸೃಷ್ಟಿದೆ.

ತಾಲ್ಲೂಕಿನ ಗರಗ ಅರಣ್ಯ ಪ್ರದೇಶ, ಅಮೃತಮಹಲ್ ಕಾವಲ್‌ಗಳ ಹಂಚಿನ ಕಾಡು ಮೆಡು, ಬೆಟ್ಟಗಳಲ್ಲಿ ಆಹಾರಕ್ಕಾಗಿ ಅಲೆಯುತ್ತಿದ್ದ ಚಿರಿತೆಗಳು ಇದುವರೆಗೆ ಹೊಲ ಗದ್ದೆ ತೋಟಗಳಲ್ಲಿ ಕಾಣಿಸಿಕೊಳ್ಳುತ್ತಿದ್ದು ಸಾಮಾನ್ಯ. ಈಗಾ ನೀರು ಅಹಾರಕ್ಕಾಗಿ ಹಳ್ಳಿಗಳತ್ತ ಮುಖ ಮಾಡಿವೆ. ಹಳ್ಳಿಗಳ ಹಾದಿ ಬೀದಿಯಲ್ಲಿ ಶ್ವಾನಗಳನ್ನು ಹಿಡಿದು ಆಹಾರಕ್ಕಾಗಿ ಹೊತ್ತೊಯ್ದಿವೆ.

ಕಳೆದ ಒಂದು ತಿಂಗಳಿಂದ ಚಿರತೆಗಳು ತಾಲೂಕಿನ ಅರೇನಹಳ್ಳಿ, ಮೇಕೆನಹಳ್ಳಿ, ಕುಡಿ ನೀರಕಟ್ಟೆ, ಚೀರನಹಳ್ಳಿ, ಚಿಕ್ಕಜಾಜೂರು, ಅರಸಣಘಟ್ಟ, ಅಮೃತಾಪುರ, ಕೊಳಾಳ್, ಗುಂಡೇರಿ, ಮಾಳೆನಹಳ್ಳಿ, ಗಿಲಿಕೆನಹಳ್ಳಿ ಸೇರಿ ಅರಣ್ಯ ಹಂಚಿನ ಹಳ್ಳಿಗಳಲ್ಲಿ ನಿತ್ಯ ಕಾಣಿಸಿಕೊಳ್ಳುತ್ತಿದ್ದು, ರೈತರು ಅವುಗಳನ್ನು ಬೆದರಿಸುತ್ತಿದ್ದರು. ಬೇಸಿಗೆ ಬಿಸಿಲು ಹೆಚ್ಚಾದ ಹಿನ್ನೆಲೆ ಚಿರಿತೆಗಳು ತೋಟಗಳ ತಣ್ಣನೆ ವಾತವರಣದಲ್ಲಿ ವಾಸಗಿಳಿದಿವೆ. ರೈತರು ತೋಟಗಳಲ್ಲಿ ನೀರು ಹಾಯಿಸುವ ಹೊತ್ತಲ್ಲಿ ಚಿರಿತೆ ಭಯ ಎದುರಿಸಿದ್ದು ಇದೆ.



ಚಿರಿತೆ ಇವೆ. ಜನರ ಮೇಲೆ ದಾಳಿ ಮಾಡಿಲ್ಲ. ಬೆಂಕಿಯಿಂದ ಅರಣ್ಯ ರಕ್ಷಣೆ ಜತೆ ಇಲ್ಲಿನ ಪ್ರಾಣಿಗಳನ್ನು ರಕ್ಷಿಸಬೇಕು. ಚಿರತೆಗಳಿಂದ ಜನರಿಗೆ ತೊಂದರೆಯಾದಂತೆ ಎಚ್ಚರಿಕೆ ವಹಿಸಲು ಅರಣ್ಯ ಇಲಾಕೆ ಸೂಚಿಸಲಾಗುತ್ತದೆ. ಅವುಗಳನ್ನು ಹಿಡಿಯಲು ಕ್ರಮ ವಹಿಸುವಂತೆ ತಿಳಿಸಲಾಗುತ್ತದೆ

» **ಬೀಬಿ ಫಾತೀಮಾ ತಹಸೀಲ್ದಾರ್**

ಬೇಸಿಗೆ ಬಿಸಿಲು ದಿನ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಗುಡ್ಡ ಗಾಡು ಮೇಡುಗಳಲ್ಲಿ ಆಹಾರವಿಲ್ಲದೆ ಪರಿತಪಿಸುತ್ತಿರುವ ವನ್ಯಮೃಗಗಳು ನೀರು ಆಹಾರ ಅರಸಿ ಹಳ್ಳಿ ಪಕ್ಕದ ಕೆರೆ, ಕಟ್ಟೆ, ನೀರಿನ ಸ್ಥಳಗಳಿಗೆ ಬರುತ್ತಿವೆ. ಮೇಯಲು ಅಡವಿಗೆ ಹೊಗುವ ಎಷ್ಟೋ ಜಾನುವಾರುಗಳು ಧೀಡಿರ್ ಕಣ್ಮರೆಯಾಗುತ್ತಿದೆ. ತಡರಾತ್ರಿ ಹೊತ್ತು ಊರಿನ ಪಕ್ಕದಲ್ಲಿ ಚಿರತೆಗಳು ಬಂದು ಹೋಗುದನ್ನು ನೋಡಿದ ಸಾಕಷ್ಟು ಜನರು ಬೆಚ್ಚಿ ಬೀದಿದ್ದಾರೆ. ಒಟ್ಟಾರೆ ತಾಲೂಕಿನಲ್ಲಿ ಚಿರಿತೆಗಳು ಆಹಾರಕ್ಕಾಗಿ ಜನ ಜಾನುವಾರುಗಳ ಎನ್ನದೆ ಎಲ್ಲಾರ ಮೇಲೆ ದಾಳಿ ನಡೆಸುವ ಕಾಲ ಸನ್ನಿತವಾಗಿದೆ.

ಹೊಳಲ್ಕೆರೆ ಪಟ್ಟಣದ ಪುರಸಭೆಯ ಘನತ್ಯಾಜ್ಯ ಘಟಕದಲ್ಲಿದ್ದ ನೂರಾರು ಶ್ವಾನಗಳು ಕಣ್ಮರೆಯಾಗಿವೆ. ಅವುಗಳನ್ನು ಚಿರತೆಗಳ ಬೇಟೆಯಾಡಿವೆ. ಅಷ್ಟಕ್ಕೇ ಸಾಲದಂತೆ ಶಿವಲಿಂಗಪ್ಪ ಬಡಾವಣೆ, ಒಂಟಿಕಂಭದ ಮಠ, ಸೇರಿ ತಾಲೂಕಿನ ತೋಟದ ಮನೆಗಳ ಶ್ವಾನಗಳು, ಮೇಕೆ, ಕುರಿ, ಜಾನುವಾರುಗಳ ಕಣ್ಮರೆಯಾಗಿವೆ. ಎಚ್ಚರಿಕೆವಹಿಸಬೇಕು.ಇಲ್ಲವಾದಲ್ಲಿನರಭಕ್ಷಕ ಪ್ರಾಣಿಗಳಾಗಿ ಪರಿವರ್ತನೆಯಾದಲ್ಲಿ ಜೀವನ ಹಾನಿಯಾದರೂ ಆಶ್ಚರ್ಯವಿಲ್ಲ.

**ಅರಣ್ಯ ಪ್ರದೇಶದಲ್ಲಿ ಆಹಾರ ನೀರು ಸಿಕ್ಕುತ್ತಿಲ್ಲ** : ಅರಣ್ಯ ಪ್ರದೇಶದಲ್ಲಿ ವನ್ಯಮೃಗಗಳಿಗೆ ಆಹಾರ ನೀರು ಸಿಕ್ಕುತ್ತಿಲ್ಲ. ಇಲಾಖೆ ಸೌಲಭ್ಯ ಕಲ್ಪಿಸಿಲ್ಲ. ಅರಣ್ಯದಲ್ಲಿ ಸಾಕಷ್ಟು ಚಿರಿತೆ, ಕರಡಿ, ತೋಳ, ನರಿ ಇದ್ದರೂ ಅವುಗಳ ರಕ್ಷಣೆ ಹೊಣೆಗೆ ಇಲಾಖೆ ಕಣ್ಮೆಚ್ಚಿದೆ, ಹಾಗಾಗಿ ಅರಣ್ಯದಲ್ಲಿ ಆಯ್ದ ಪ್ರದೇಶದಲ್ಲಿ ಆಹಾರ ನೀರಿನ ವ್ಯವಸ್ಥೆ ಮಾಡಬೇಕು. ವನ್ಯಮೃಗ ರಕ್ಷಣೆ ಜತೆ ಜನವಸತಿ ಪ್ರದೇಶಕ್ಕೆ ಲೆಗ್ಗೆ ಹಾಕುವುದನ್ನು ತಪ್ಪಿಸಬೇಕು.

ಬೆಂಕಿಗೆ ಬೇದರುತ್ತಿರುವ ವನ್ಯಮೃಗ : ಇತ್ತೀಚಿನ ದಿನಗಳಲ್ಲಿ ಅರಣ್ಯದಲ್ಲಿ ಬೆಂಕಿ ಕೆನ್ನಾಲಿಗೆ ಹೆಚ್ಚಾಗುತ್ತಿದೆ. ಕುರಿಗಾಯಿ, ಧನಗಾಯಿಗಳು ಹೊಸ ಹುಲ್ಲಿನ ನಿರೀಕ್ಷೆ ಹಿನ್ನೇಲೆಯಲ್ಲಿ ಅರಣ್ಯ ಪ್ರದೇಶದ ಒಣ ಹುಲ್ಲಿಗೆ ಬೆಂಕಿ ಹಾಕುತ್ತಾರೆ. ಇದು ಅರಣ್ಯ, ಗುಡ್ಡಗಾಡು ಪ್ರದೇಶಕ್ಕೆ ಆವರಿಸುತ್ತಿದೆ. ಅಲ್ಲಿನ ಸಾಕಷ್ಟು ಪ್ರಾಣಿಗಳು ಸುಟ್ಟು ಹೊಗುತ್ತದೆ. ಬೆಂಕಿ ಬಿಸಿಗೆ ಅರಣ್ಯಕ್ಕೆ ಹೊಗದ ಚಿರಿತೆ ಹಾಗೂ ವನ್ಯಮೃಗಗಳು ಅನ್ಯಮಾರ್ಗವಿಲ್ಲದೆ ರಕ್ಷಣೆಗಾಗಿ ಹೊಲ ಗದ್ದೆ ತೋಟಗಳಲ್ಲಿ ಜೀವಿಸುತ್ತಿವೆ.

## ಫಾಸ್ಟ್ ನ್ಯೂಸ್

### ಕೌಶಲ್ಯಾಭಿವೃದ್ಧಿ ತರಬೇತಿಗೆ ಅರ್ಜಿ ಆಹ್ವಾನ

» ದಾವಣಗೆರೆ

ಪ್ರಸಕ್ತ ಸಾಲಿನಲ್ಲಿ ಪ್ರವಾಸೋದ್ಯಮ ಕ್ಷೇತ್ರದಲ್ಲಿ ಕೌಶಲ್ಯಾಭಿವೃದ್ಧಿ ತರಬೇತಿ ಕಾರ್ಯಕ್ರಮವನ್ನು ಪರಿಶಿಷ್ಟ ಜಾತಿಗೆ ಸೇರಿದ 292 ಹಾಗೂ ಪರಿಶಿಷ್ಟ ಪಂಗಡಕ್ಕೆ ಸೇರಿದ 162 ಅಭ್ಯರ್ಥಿಗಳಿಗೆ ರಾಜ್ಯ ಹಾಗೂ ಕೇಂದ್ರ ಸರ್ಕಾರದ ಅತಿಥ್ಯ ಕ್ಷೇತ್ರದ ಸಂಸ್ಥೆಗಳಾದ ಆಹಾರ ಕರಕುಶಲ ಸಂಸ್ಥೆ ಮೈಸೂರು (Food Craft Institute) ಮತ್ತು ಹೋಟೆಲ್ ನಿರ್ವಹಣಾ ಸಂಸ್ಥೆ ಬೆಂಗಳೂರು (Institute Of Hotel Management) ಇವರ ಸಹಯೋಗದಲ್ಲಿ ವಸತಿ ಸಹಿತ ಕಾರ್ಯಕ್ರಮವನ್ನು ಜಾರಿಗೊಳಿಸಲು ಉದ್ದೇಶಿಸಲಾಗಿದ್ದು, ಈ ಸಂಬಂಧ ಅರ್ಹ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಮಲ್ಟಿ ಕ್ಯೂಸಿನ್ ಕುಕ್ (Multi Cusine Cook) ಮತ್ತು ಫುಡ್ ಅಂಡ್ ಬೇವರೇಜ್ ಸರ್ವಿಸ್ ಸ್ಟೇವಾರ್ಡ್ (Food And Beverage Service Steward) ನಲ್ಲಿ ತರಬೇತಿ ಪಡೆಯಲು ಇಚ್ಛಿಸುವ ಜಿಲ್ಲೆಯ ಅಭ್ಯರ್ಥಿಗಳು ಮಾ.25 ರಿಂದ ನಗರದ ಉಪವಿಭಾಗಾಧಿಕಾರಿಗಳ ಕಚೇರಿ ಆವರಣದಲ್ಲಿನ ಪ್ರವಾಸೋದ್ಯಮ ಇಲಾಖೆ ಸಹಾಯಕ ನಿರ್ದೇಶಕರ ಕಚೇರಿಯಲ್ಲಿ ಅರ್ಜಿ ಪಡೆದು ಭರ್ತಿ ಮಾಡಿ, ಅಗತ್ಯ ದಾಖಲೆಗಳೊಂದಿಗೆ ದ್ವಿ–ಪ್ರತಿಯಲ್ಲಿ ಏಪ್ರಿಲ್ 3 ರೊಳಗೆ ನೇರವಾಗಿ ಇಲಾಖೆಗೆ ಸಲ್ಲಿಸಬೇಕು ಎಂದು ಪ್ರವಾಸೋದ್ಯಮ ಇಲಾಖೆ ಸಹಾಯಕ ನಿರ್ದೇಶಕಿ ಬಿ.ಕಾವ್ಯ ತಿಳಿಸಿದ್ದಾರೆ.

### ಗ್ರಾಹಕರ ಹಕ್ಕುಗಳ ಅರಿವಿನ ಜೊತೆಗೆ ಮೋಸ ಹೋದಲ್ಲಿ ಪ್ರಶ್ನಿಸುವ ಪ್ರವೃತ್ತಿ ಬೆಳೆಸಿಕೊಳ್ಳಿ



» ದಾವಣಗೆರೆ

ಗ್ರಾಹಕರು ತಮ್ಮ ಹಕ್ಕುಗಳನ್ನು ತಿಳಿದುಕೊಳ್ಳುವುದರ ಜೊತೆಗೆ ತೊಂದರೆಗಳಾದಲ್ಲಿ ಸಂಬಂಧಿಸಿದ ಪ್ರಾಧಿಕಾರಗಳಲ್ಲಿ ನಿಯಮಾನುಸಾರ ದೂರು ಸಲ್ಲಿಸಿ ಪರಿಹಾರ ಪಡೆಯಬೇಕು ಎಂದು ಜಿಲ್ಲಾಧಿಕಾರಿ ಗಂಗಾಧರಸ್ವಾಮಿ.ಜಿ.ಎಂ ಹೇಳಿದರು. ರಂದು ನಗರದ ಎಂಎಸ್‌ಬಿ ಕಲಾ ಮತ್ತು ವಾಣಿಜ್ಯ ಮಹಾ ವಿದ್ಯಾಲಯದ ಸಭಾಂಗಣದಲ್ಲಿ ವಿಶ್ವಗ್ರಾಹಕರ ದಿನಾಚರಣೆಯನ್ನು ಉದ್ಘಾಟಿಸಿ ಮಾತನಾಡಿದ ಅವರು ಎಲ್ಲಾ ಗ್ರಾಹಕರು ವಸ್ತುಗಳನ್ನು ಖರೀದಿಸುವಾಗ ಗುಣಮಟ್ಟ ಮತ್ತು ನಿಖರ ಪ್ರಮಾಣವನ್ನು ಪರಿಶೀಲಿಸಿ ಖರೀದಿಸಲು ಹಾಗೂ ಪೆಟ್ರೋಲ್ ಬಂಕ್‌ಗಳಲ್ಲಿ ಲೋಪದೋಷಗಳಿದ್ದಲ್ಲಿ ಪ್ರಶ್ನಿಸುವ ಮನೋಭಾವ ಬೆಳೆಸಿಕೊಳ್ಳಬೇಕು ಎಂದು ತಿಳಿಸಿದರು. ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಕಾರ್ಯದರ್ಶಿಗಳಾದ ಮಹಾವೀರ ಮ.ಕರೆಣ್ಣವರ ಇವರು ಗ್ರಾಹಕ ಸಂರಕ್ಷಣಾ ಕಾಯಿದೆಯ ಬಗ್ಗೆ ತಿಳಿಸಿದರು. ಸಂಪನ್ಮೂಲವ್ಯಕ್ತಿಯಾದ ಸಹಾಯಕ ಪ್ರಾಧ್ಯಾಪಕರಾದ ಡಾ.ವೇಂಕಟೇಶ್ ಬಾಬು ಈ ಸಾಲಿನ ಘೋಷವಾಕ್ಯವಾದ "ಸುಸ್ಥಿರ ಜೀವನಶೈಲಿಗೆ ಒಂದು ಸರಳ ಪರಿವರ್ತನೆ" ವಿಷಯದ ಕುರಿತು ದಿನನಿತ್ಯ ಖರೀದಿ ವಸ್ತುಗಳ ಉದಾಹರಣೆಗಳ ಸಮೇತ ಉಪನ್ಯಾಸ ನೀಡಿದರು. ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ವೇದಿಕೆ ಅಧ್ಯಕ್ಷರಾದ ತ್ಯಾಗರಾಜನ್ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ಆಹಾರ ಇಲಾಖೆಯ ಜಂಟಿ ನಿರ್ದೇಶಕರಾದ ಶಿದ್ರಾಮ ಮಾರಿಹಾಳ, ಗ್ರಾಹಕರ ವ್ಯಾಜ್ಯಗಳ ಪರಿಹಾರ ವೇದಿಕೆ ಮಹಿಳಾ ಸದಸ್ಯರಾದ ಬಿ.ವಿ.ಗೀತಾ, ಡಿ.ಸಿ.ಐ.ಸಿ ಪ್ರಾಂಶುಪಾಲರಾದ ಅನಿತಾ, ಪ್ರೊ.ಸಿ.ನೀಲಾಂಬಿಕಾ, ಸಹಾಯಕ ನಿಯಂತ್ರಕರು, ಕಾನೂನು ಮಾಪನಶಾಸ್ತ್ರ ಇಲಾಖೆ ಸಹಾಯಕ ನಿರ್ದೇಶಕರಾದ ವಿಶ್ವನಾಥಗೌಡ, ಸಹಾಯಕ ನಿರ್ದೇಶಕರಾದ ಟಿ.ಶಿವಾಜಿ, ಆಹಾರ ನಿರೀಕ್ಷಕರಾದ ಮಂಜುನಾಥ.ಟಿ ಉಪಸ್ಥಿತರಿದ್ದರು.

### ಸಹಾಯವಾಣಿ ಆರಂಭ

» ದಾವಣಗೆರೆ

ಬೇಸಿಗೆ ಹಿನ್ನೆಲೆ ಜಿಲ್ಲೆಯ ಗ್ರಾಮೀಣ ಪ್ರದೇಶಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಕಂಡು ಬಂದಲ್ಲಿ ಸಾರ್ವಜನಿಕರು ದಾವಣಗರೆ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗದ ದೂರವಾಣಿ ಸಂಖ್ಯೆ: 08192–262126, ದಾವಣಗೆರೆ ಉಪವಿಭಾಗ: 08192–262120, ಹರಿಹರ : 08192–242352, ಚನ್ನಗಿರಿ: 08189–295071, ಹೊನ್ನಾಳಿ: 08188–252571, ಜಗಳೂರು: 08196–227707 ಗೆ ಸಂಪರ್ಕಿಸಬಹುದು ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕಾಧಿಕಾರಿ ಸುರೇಶ್ ಬಿ ಇಟ್ನಾಳ್ ತಿಳಿಸಿದ್ದಾರೆ.

### ರಾಷ್ಟ್ರೀಯ, ಅಂತರಾಷ್ಟ್ರೀಯ ಯೋಗ ಪ್ರಶಸ್ತಿ: ಅರ್ಜಿ

» ದಾವಣಗೆರೆ

ಪ್ರಧಾನ ಮಂತ್ರಿ ರಾಷ್ಟ್ರೀಯ, ಅಂತರಾಷ್ಟ್ರೀಯ ಮಟ್ಟದ ಅತ್ಯುನ್ನತ ಯೋಗ ಪ್ರಶಸ್ತಿಯನ್ನು ಘೋಷಿಸಲಾಗಿದ್ದು, ಈ ಸಂಬಂಧ ಯೋಗ ಕ್ರೀಡೆಗೆ ಅತ್ಯುನ್ನತವಾದ ಕೊಡುಗೆ ನೀಡಿರುವಂತಹ ಕ್ರೀಡಾಪಟುಗಳು ಅಥವಾ ಯೋಗ ಸಂಸ್ಥೆಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

# ತಾಯಿ ಮರಣ, ಸಿಜೇರಿಯನ್ ಹೆರಿಗೆ ಪ್ರಮಾಣ ಹೆಚ್ಚಳಕ್ಕೆ ಜಿಲ್ಲಾ ಸಚಿವ ಡಿ. ಸುಧಾಕರ್ ಕಳವಳ





» ಚಿತ್ರದುರ್ಗ

ರಾಜ್ಯದ ಸರಾಸರಿಗಿಂತಲೂ, ಜಿಲ್ಲೆಯಲ್ಲಿ ತಾಯಿ ಮರಣ, ಶಿಶು ಮರಣ ಹಾಗೂ ಸಿಜೇರಿಯನ್ ಪ್ರಮಾಣ ಹೆಚ್ಚಳಕ್ಕೆ ಕೆಡಿಪಿ ಸಭೆಯಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಡಿ. ಸುಧಾಕರ್ ಅವರು ಕಳವಳ ವ್ಯಕ್ತಪಡಿಸಿ, ತಾಯಿ ಮರಣ, ಶಿಶು ಮರಣಕ್ಕೆ ಸಂಬಂಧಿಸಿದಂತೆ ಪ್ರತಿ ಕೇಸ್‌ಗೂ ಪ್ರತ್ಯೇಕ ವಿಶ್ಲೇಷಣಾ ವರದಿ ಸಲ್ಲಿಸುವಂತೆ ಆರೋಗ್ಯ ಇಲಾಖೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಸೋಮವಾರ ನಗರದ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಜರುಗಿದ ತ್ರೈಮಾಸಿಕ ಕೆಡಿಪಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ರಾಜ್ಯದ ಸರಾಸರಿಗಿಂತಲೂ ಜಿಲ್ಲೆಯಲ್ಲಿ ತಾಯಿ ಮರಣ, ಶಿಶು ಮರಣ ಹಾಗೂ ಸಿಜೇರಿಯನ್ ಪ್ರಮಾಣ ಹೆಚ್ಚಳಕ್ಕೆ ಕೆಡಿಪಿ ಸಭೆಯಲ್ಲಿ ಸಚಿವರು ಸೇರಿದಂತೆ ಶಾಸಕರು ತೀವ್ರ ಕಳವಳ ವ್ಯಕ್ತಪಡಿಸಿದರು. ಹೊಳಲ್ಕೆರೆ ಶಾಸಕ ಡಾ. ಎಂ.ಚಂದ್ರಪ್ಪ ಮಾತನಾಡಿ, ಜಿಲ್ಲೆಯ ಎಲ್ಲ ತಾಲ್ಲೂಕುಗಳಲ್ಲಿಯೂ ತಾಯಿ ಮತ್ತು ಮಕ್ಕಳ ಆಸ್ಪತ್ರೆಗಳು ಕಾರ್ಯನಿರ್ವಹಿಸುತ್ತಿವೆ. ಆಸ್ಪತ್ರೆಗಳಲ್ಲಿ ತಜ್ಞ ವೈದ್ಯರು ಇದ್ದಾರೆ. ಜತೆಗೆ ಪೂರಕ ಪೌಷ್ಠಿಕ ಆಹಾರ, ಅಗತ್ಯ ಔಷಧಿಗಳು ಇವೆ. ಆದಾಗ್ಯೂ ಸರ್ಕಾರಿ ಆಸ್ಪತ್ರೆಗಳಲ್ಲಿಯೇ ಯಾಕೆ ತಾಯಿ ಮರಣ ಸಂಭವಿಸುತ್ತದೆ. ಬಡವರ ಹೆಣ್ಣು ಮಕ್ಕಳ ಸಾವಿಗೆ ಬೆಲೆ ಇಲ್ಲವೇ? ಇದಕ್ಕೆ ವೈದ್ಯರ ನಿರ್ಲಕ್ಷ್ಯವೇ ಕಾರಣ ಎಂದು ಆರೋಪಿಸಿದ ಅವರು, ಇದರ ಬಗ್ಗೆ ಹೆಚ್ಚಿನ ಗಮನಹರಿಸಬೇಕು ಎಂದು ಸೂಚನೆ ನೀಡಿದರು. ಹೊಸದುರ್ಗ ಶಾಸಕ ಬಿ.ಜಿ.ಗೋವಿಂದಪ್ಪ ಮಾತನಾಡಿ, ಹೊಸದುರ್ಗ ತಾಲ್ಲೂಕಿನಲ್ಲಿಯೂ ಗರ್ಭಿಣಿಯರ ಸಾವು ಹಾಗೂ ಬಾಲ ಗರ್ಭಿಣಿಯರ ಸಂಖ್ಯೆ ಹೆಚ್ಚಳವಾಗುತ್ತಿದೆ. ತಾಯಿ ಮರಣ, ಶಿಶು ಮರಣ ತಡೆಯುವವರು ಯಾರು ಎಂದು ಪ್ರಶ್ನಿಸಿದ ಅವರು, ಆರೋಗ್ಯ ಇಲಾಖೆ ಹಾಗೂ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯವರು ಸಮನ್ವಯದಿಂದ ಕಾರ್ಯನಿರ್ವಹಿಸಬೇಕು ಎಂದು ಹೇಳಿದರು. ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ ಮಾತನಾಡಿ, ಸಹಜ ಹೆರಿಗೆ ಮಾಡಿಸಲು ಶಿಫಾರಸ್ಸು ಮಾಡುವಂತೆ ಮನೆಗೆ ಬಂದು ಅಳಲು ತೋಡಿಕೊಳ್ಳುತ್ತಿದ್ದಾರೆ. ಸಾರ್ವಜನಿಕರಿಗೆ ಸಹಜ ಹೆರಿಗೆಯ ಅರಿವು ಆಗಿದೆ. ಆದರೆ ವೈದ್ಯಾಧಿಕಾರಿಗಳೇ ಸಿಜೇರಿಯನ್‌ಗೆ ಮುಂದಾಗುತ್ತಿದ್ದಾರೆ. ಸಹಜ ಹೆರಿಗೆ ಮಾಡಿಸುವಂತೆ ಶಿಫಾರಸ್ಸು ಮಾಡುವ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದರು. ವಿಧಾನ ಪರಿಷತ್ ಸದಸ್ಯ ಕೆ.ಎಸ್.ನವೀನ್ ಮಾತನಾಡಿ, ತಾಯಿ ಮರಣ, ಶಿಶು ಮರಣ ಹಾಗೂ ಸಿಜೇರಿಯನ್ ಹೆಚ್ಚಳ ಕುರಿತಂತೆ ಆರೋಗ್ಯ ಇಲಾಖೆ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಅಧಿಕಾರಿಗಳಿಗೆ ವರದಿ ನೀಡುವಂತೆ ನೋಟಿಸ್ ನೀಡುವಂತೆ ತಾಕೀತು ಮಾಡಿದರು. ತಾಯಿ ಮರಣ, ಶಿಶು ಮರಣಕ್ಕೆ ಸಂಬಂಧಿಸಿದಂತೆ ಪ್ರತಿ ಕೇಸ್‌ಗೂ ಪತ್ಯೇಕ ವಿಶ್ಲೇಷಣಾ ವರದಿ ನೀಡುವಂತೆ ಜಿಲ್ಲಾ ಆರೋಗ್ಯಾಧಿಕಾರಿ ಡಾ.ಜಿ.ಪಿ.ರೇಣುಪ್ರಸಾದ್ ಅವರಿಗೆ ಜಿಲ್ಲಾ ಉಸ್ತುವಾರಿ ಸಚಿವರು ಸೂಚನೆ ನೀಡಿದರು.

ಜಿಲ್ಲೆಯಲ್ಲಿ ತಾಯಿ ಮರಣ, ಶಿಶು ಮರಣ ಕಡಿಮೆ ಮಾಡುವ ನಿಟ್ಟಿನಲ್ಲಿ ಪ್ರತಿ ತಿಂಗಳು 6ನೇ ತಾರೀಖು ಹಾಗೂ 24 ನೇ ತಾರೀಖು ಗರ್ಭಿಣಿಯರಿಗೆ ವಿವಿಧ ಪರೀಕ್ಷೆಗಳನ್ನು ನಡೆಸಿ, ಅವರಿಗೆ ಕಬ್ಬಿಣಾಂಶದ ಮಾತ್ರೆ ಸೇರಿದಂತೆ ವಿವಿಧ ಅಗತ್ಯ ಚಿಕಿತ್ಸೆ ಔಷಧಗಳನ್ನು ನೀಡಲಾಗುತ್ತಿದೆ ಎಂದು ಡಾ. ರೇಣುಪ್ರಸಾದ್ ಮಾಹಿತಿ ನೀಡಿದರು.

**1544 ಶಾಲೆ ಕೊಠಡಿಗಳ ಅವಶ್ಯಕತೆ:** ಜಿಲ್ಲೆಯಲ್ಲಿ ಒಟ್ಟು 1544 ಶಾಲೆ ಕೊಠಡಿಗಳ ನಿರ್ಮಾಣದ ಅವಶ್ಯಕತೆಯಿದೆ ಎಂದು ಡಿಡಿಪಿಐ ಮಂಜುನಾಥ್ ಸಭೆಗೆ ಮಾಹಿತಿ ನೀಡಿದರು. ಶಾಲೆ ನಿರ್ಮಾಣ ಕಾರ್ಯ ದೇವಾಲಯ ನಿರ್ಮಾಣದಷ್ಟೇ ಪವಿತ್ರವಾದ ಕೆಲಸ. ಇದಕ್ಕೆ ಒತ್ತು ನೀಡಿ ಶಾಸಕರ ಅನುದಾನ, ಡಿಎಂಎಫ್, ಕೆ.ಎಂ.ಇ.ಆರ್.ಸಿ ಸೇರಿದಂತೆ ಎಲ್ಲ ಯೋಜನೆಗಳಲ್ಲಿಯೂ ಅನುದಾನ ಒದಗಿಸಲಾಗಿದೆ. 2022–23 ರಲ್ಲಿ 591 ಶಾಲಾ ಕೊಠಡಿಗಳ ನಿರ್ಮಾಣಕ್ಕೆ ಅನುದಾನ ಒದಗಿಸಲಾಗಿದೆ. ಇದರಲ್ಲಿ ಇನ್ನೂ 202 ಕಾಮಗಾರಿಗಳು ಪೂರ್ಣಗೊಂಡಿಲ್ಲ.

ಪಂಚಾಯತ್ ರಾಜ್ ಮತ್ತು ಇಂಜಿನಿಯರಿಂಗ್ ವಿಭಾಗಕ್ಕೆ ವಹಿಸಿದ 362 ಶಾಲಾ ಕೊಠಡಿಗಳ ನಿರ್ಮಾಣ ಕಾಮಗಾರಿಗಳಲ್ಲಿ 175 ಪೂರ್ಣಗೊಂಡಿವೆ. 113 ಪ್ರಗತಿಯಲ್ಲಿವೆ. 74 ಶಾಲಾ ಕೊಠಡಿಗಳ ನಿರ್ಮಾಣ ಕಾಮಗಾರಿ ಆರಂಭವಾಗಿಲ್ಲ. ಇದಕ್ಕೆ ಪಂಚಾಯತ್ ರಾಜ್ ಮತ್ತು ಇಂಜಿನಿಯರಿಂಗ್ ವಿಭಾಗದ ಕಾರ್ಯನಿರ್ವಾಹಕ ಇಂಜಿನಿಯರ್ ಅವರನ್ನು ಹೊಣೆ ಮಾಡಿ ಕಠಿಣ ಕ್ರಮ ಕೈಗೊಳ್ಳುವಂತೆ ಸಚಿವ ಡಿ.ಸುಧಾಕರ್ ಜಿ.ಪಂ. ಸಿಇಓ ಎಸ್.ಜೆ.ಸೋಮಶೇಖರ್ ಅವರಿಗೆ ಸೂಚನೆ ನೀಡಿದರು.

**ಬೋರವೆಲ್ ಬಾಕಿ ಪಾವತಿಗೆ ಸೂಚನೆ:** ಕಳೆದ ವರ್ಷದ ಬೇಸಿಗೆ ಕಾಲದಲ್ಲಿ ಕುಡಿಯುವ ನೀರಿನ ಸಲುವಾಗಿ ಜಿಲ್ಲೆಯ ಎಲ್ಲಾ ತಾಲ್ಲೂಕುಗಳಲ್ಲಿ ಕೊರೆಯಿಸಿದ 390 ಬೋರ್‌ವೆಲ್‌ಗಳ ಬಾಕಿ ರೂ.5 ಕೋಟಿ ಪಾವತಿ ಬಾಕಿಯಿದೆ. ಸದ್ಯ ಲಭ್ಯ ಇರುವ ಅನುದಾನದಲ್ಲಿ ಬಾಕಿ ಮೊತ್ತ ಪಾವತಿಗೆ ಕ್ರಮ ಕೈಗೊಳ್ಳಬೇಕು. ಇಲ್ಲವಾದರೆ ಈ ಬಾರಿ ಬೇಸಿಗೆ ಕಾಲದಲ್ಲಿ ಬೋರ್‌ವೆಲ್ ಕೊರೆಯಲು ಗುತ್ತಿಗೆದಾರರು ಮುಂದೆ ಬರುವುದಿಲ್ಲ. ಇದರಿಂದ ಕುಡಿಯುವ ನೀರಿನ ಸರಬರಾಜಿಗೆ ತೊಂದರೆ ಎದುರಾಗುತ್ತದೆ. ಜಿಲ್ಲಾಧಿಕಾರಿಗಳು ಈ ಬಗ್ಗೆ ಕ್ರಮ ಕೈಗೊಳ್ಳುವಂತೆ ಸಭೆಯಲ್ಲಿ ಸಚಿವ ಡಿ.ಸುಧಾಕರ್ ಸೇರಿದಂತೆ ಎಲ್ಲಾ ಶಾಸಕರು ಸೂಚಿಸಿದರು.

**ಮಾರ್ಚ್ ಒಳಗೆ ರಸ್ತೆ ಗುಂಡಿಗಳನ್ನು ಮುಚ್ಚಬೇಕು:** ಲೋಕೋಪಯೋಗಿ ಇಲಾಖೆ ವತಿಯಿಂದ ರಸ್ತೆ ಗುಂಡಿಗಳನ್ನು ಸರಿಯಾಗಿ ಮುಚ್ಚಿಲ್ಲ ಎಂದು ಸಚಿವ ಡಿ.ಸುಧಾಕರ್ ಅಸಮಾಧಾನ ವ್ಯಕ್ತಪಡಿಸಿದರು. ಕಳೆದ ಕೆಡಿಪಿ ಸಭೆಯಲ್ಲಿ ರಸ್ತೆ ಗುಂಡಿ ಮುಚ್ಚುವಂತೆ ಸೂಚಿಸಿದ್ದರೂ ಸಹ ಸರಿಯಾಗಿ ಕೆಲಸ ಮಾಡದಿದ್ದರೆ ಹೇಗೆ ಎಂದು ಪ್ರಶ್ನಿಸಿದರು. ಮಾರ್ಚ್ ಮಾಹೆಯ ಅಂತ್ಯದೊಳಗೆ ಜಿಲ್ಲೆಯ ಎಲ್ಲ ರಸ್ತೆ ಗುಂಡಿಗಳನ್ನು ಮುಚ್ಚಿಸಲು ಕ್ರಮ ವಹಿಸಲಾಗುವುದು ಎಂದು ಲೋಕೋಪಯೋಗಿ ಇಲಾಖೆ ಕಾರ್ಯಪಾಲಕ ಅಭಿಯಂತರರು ಸಭೆಗೆ ಮಾಹಿತಿ ನೀಡಿದರು. ನಿಗದಿತ ಅವಧಿಯೊಳಗೆ ರಸ್ತೆ ಗುಂಡಿಗಳನ್ನು ಮುಚ್ಚದಿದ್ದಲ್ಲಿ, ಕಡ್ಡಾಯ ರಜೆಗೆ ಕಳುಹಿಸಲಾಗುವುದು ಜಿಲ್ಲಾ ಉಸ್ತುವಾರಿ ಸಚಿವರು ಇದೇ ವೇಳೆ ಎಚ್ಚರಿಕೆ ನೀಡಿದರು.

**ಸಾರ್ವಜನಿಕರ ದೂರುಗಳಿಗೆ ಸ್ಪಂದಿಸಿ:** ಬೇಸಿಗೆ ಪ್ರಾರಂಭವಾಗಿರುವುದರಿಂದ ವಿದ್ಯುತ್ ಪೂರೈಕೆ ಸಂಬಂಧ ವಿವಿಧೆಡೆಯಿಂದ ಸಾಕಷ್ಟು ದೂರುಗಳು ಬರುತ್ತಿವೆ. ಸಾರ್ವಜನಿಕರು ಹಾಗೂ ಜನಪ್ರತಿನಿಧಿಗಳೊಂದಿಗೆ ಶಿಷ್ಠಾಚಾರ ಪಾಲನೆ ಮಾಡಬೇಕು. ದೂರುಗಳಿಗೆ ತ್ವರಿತವಾಗಿ ಸ್ಪಂದಿಸಲು ಕ್ರಮವಹಿಸಬೇಕು ಎಂದು ಬೆಸ್ಕಾಂ ಕಾರ್ಯಪಾಲಕ ಇಂಜಿನಿಯರ್ ತಿಮ್ಮರಾಯಪ್ಪ ಅವರಿಗೆ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಸೂಚನೆ ನೀಡಿದರು, ಇನ್ನೊಂದು ಬಾರಿ ನಿಮ್ಮ ಮೇಲೆ ದೂರುಗಳು ಬಂದರೆ ಶಿಸ್ತುಕ್ರಮ ಕೈಗೊಳ್ಳಲಾಗುವುದು ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಎಚ್ಚರಿಕೆ ನೀಡಿದರು.

**ಜೆಜೆಎಂ ಕಾಮಗಾರಿ ಪೂರ್ಣಗೊಳಿಸಿ:** ಜಲಜೀವನ್ ಮಿಷನ್ ಯೋಜನೆಯಡಿ ಕೈಗೊಂಡಿರುವ ಕಾಮಗಾರಿಗಳನ್ನು ತ್ವರಿತವಾಗಿ ಪೂರ್ಣಗೊಳಿಸುವಂತೆ ಶಾಸಕ ಬಿ.ಜಿ.ಗೋವಿಂದಪ್ಪ ಹಾಗೂ ಶಾಸಕ ಟಿ.ರಘುಮೂರ್ತಿ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಬೇಸಿಗೆಯ ಸಂದರ್ಭದಲ್ಲಿ ಗ್ರಾಮಗಳಲ್ಲಿ ಸಾರ್ವಜನಿಕರಿಗೆ ಉತ್ತರಿಸಲು ಆಗುತ್ತಿಲ್ಲ. ಶೀಘ್ರವಾಗಿ ಜೆಜೆಎಂ ಕಾಮಗಾರಿ ಪೂರ್ಣಗೊಳಿಸದಿದ್ದರೆ ಹೇಗೆ? ನೀವು ಪೂರ್ಣಗೊಳಿಸುತ್ತಿಲ್ಲ, ನಾವು ಜನರಿಂದ ಹೇಳಿಸಿಕೊಳ್ಳುವುದು ತಪ್ಪುತ್ತಿಲ್ಲ ಎಂದು ತೀವ್ರ ಅಸಮಾಧಾನ ವ್ಯಕ್ತಪಡಿಸಿದರು.

**ಸಚಿವರ ತೀವ್ರ ಅಸಮಾಧಾನ :** ವಿವಿಧ ಇಲಾಖೆ ಅಧಿಕಾರಿಗಳ ಕಾರ್ಯವೈಖರಿಗೆ ಯೋಜನೆ ಮತ್ತು ಸಾಂಖ್ಯಿಕ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ತೀವ್ರ ಅಸಮಧಾನ ವ್ಯಕ್ತಪಡಿಸಿದರು. ಎಸ್.ಸಿ ಹಾಗೂ ಎಸ್.ಟಿ ಜನರು ಹೆಚ್ಚಿರುವ ಚಿತ್ರದುರ್ಗ ಜಿಲ್ಲೆಯಲ್ಲಿ ಕಳೆದ ಎರಡು ವರ್ಷಗಳಿಂದ ಅಭಿವೃದ್ಧಿ ಕಾಮಗಾರಿಗಳು ವೇಗವಾಗಿ ನಡೆಯುತ್ತಿಲ್ಲ. ಅಧಿಕಾರಿಗಳಿಗೆ ಬದ್ಧತೆ ಇಲ್ಲದಂತಾಗಿದೆ. ಕಠಿಣ ಪರಿಶ್ರಮ ವಹಿಸಿ ಕೆಲಸ ಮಾಡಲು ಇಷ್ಟವಿರದ ಅಧಿಕಾರಿಗಳು ಕಡ್ಡಾಯ ರಜೆಯ ಮೇಲೆ ತೆರಳಿ, ಇಲ್ಲವಾದರೆ ವರ್ಗಾವಣೆ ತೆಗೆದುಕೊಂಡು ಜಿಲ್ಲೆಯಿಂದ ನಿರ್ಗಮಿಸಿ ಎಂದು ಸಚಿವ ಡಿ.ಸುಧಾಕರ್ ಖಡಕ್ ಸೂಚನೆ ನೀಡಿದರು.

2022–23ನ ಸಾಲಿನಲ್ಲಿಯೇ ಶಾಸಕರ ಪ್ರದೇಶಾಭಿವೃದ್ಧಿ ಅನುದಾನ ಹಾಗೂ ನರೇಗಾ ಪರಿವರ್ತನೆಯಡಿ ಹಿರಿಯೂರು ಕ್ಷೇತ್ರದಲ್ಲಿ ಮಂಜೂರಾದ ಶಾಲೆ, ಅಂಗನವಾಡಿ ಹಾಗೂ ಶೌಚಾಲಯ ಕಟ್ಟಡಗಳ ಕಾಮಗಾರಿ ಪೂರ್ಣಗೊಂಡಿಲ್ಲ. ಕೆಲವು ಸ್ಥಳಗಳಲ್ಲಿ ಕಾಮಗಾರಿಗಳನ್ನು ಆರಂಭಿಸಿಲ್ಲ. ಅಭಿವೃದ್ಧಿ ಮಾಡುತ್ತಾರೆ ಎಂದು ಭಾವಿಸಿ ಜನರು ನಮ್ಮನ್ನು ಆಯ್ಕೆ ಮಾಡಿದ್ದಾರೆ. ಅವರಿಗೆ ಉತ್ತರ ನೀಡುವ ಜವಾಬ್ದಾರಿ ನಮ್ಮ ಮೇಲಿದೆ ಎಂದು ಸಚಿವರು ತೀವ್ರ ಅಸಮಾಧಾನ ವ್ಯಕ್ತಪಡಿಸಿದರು.

ಸಭೆಯಲ್ಲಿ ಶಾಸಕರಾದ ಎನ್.ವೈ. ಗೋಪಾಲಕೃಷ್ಣ, ಟಿ.ರಘುಮೂರ್ತಿ, ಬಿ.ಜಿ.ಗೋವಿಂದಪ್ಪ, ಡಾ.ಎಂ.ಚಂದ್ರಪ್ಪ, ಕೆ.ಸಿ.ವೀರೇಂದ್ರ ಪಪ್ಪಿ, ವಿಧಾನ ಪರಿಷತ್ ಸದಸ್ಯ ಕೆ.ಎಸ್.ನವೀನ್, ಜಿಲ್ಲಾ ಗ್ಯಾರಂಟಿ ಯೋಜನಾ ಪ್ರಾಧಿಕಾರದ ಅಧ್ಯಕ್ಷ ಆರ್.ಶಿವಣ್ಣ, ಜಿಲ್ಲಾಧಿಕಾರಿ ಟಿ.ವೆಂಕಟೇಶ್, ಜಿಲ್ಲಾ ಪಂಚಾಯಿತಿ ಸಿಇಒ ಎಸ್.ಜೆ. ಸೋಮಶೇಖರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರಂಜಿತ್ ಕುಮಾರ್ ಬಂಡಾರು ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು ಇದ್ದರು.

## ಪ್ರಸಕ್ತ ಅವಧಿಯಲ್ಲಿಯೇ ರಸ್ತೆ ಅಗಲೀಕರಣಕ್ಕೆ ನಿರ್ದೇಶನ

ಚಿತ್ರದುರ್ಗ ನಗರದ ಪಿ.ಬಿ ರಸ್ತೆ ಅಗಲೀಕರಣ ಕಾರ್ಯ ನಮ್ಮ ಅಧಿಕಾರ ಅವಧಿಯಲ್ಲಿಯೇ ಪೂರ್ಣಗೊಳ್ಳಬೇಕು. ಭೂಸ್ವಾಧೀನಾಧಿಕಾರಿ ವೆಂಕಟೇಶ್ ನಾಯ್ಕ್ ಹಾಗೂ ನಗರಸಭೆ ಅಧಿಕಾರಿಗಳು ಸೂಕ್ತ ದಾಖಲೆಗಳನ್ನು ಸಂಗ್ರಹಿಸಿ, ರಸ್ತೆ ಅಗಲೀಕರಣ ಕಾರ್ಯಕ್ಕೆ ಮುಂದಾಗಬೇಕು ಎಂದು ಸಚಿವ ಡಿ.ಸುಧಾಕರ್ ಸಭೆಯಲ್ಲಿ ನಿರ್ದೇಶನ ನೀಡಿದರು. ಸರ್ವೋಚ್ಚ ನ್ಯಾಯಾಲಯವೇ ಧಾರ್ಮಿಕ ಶ್ರದ್ಧಾ ಕೇಂದ್ರಗಳನ್ನೇ ರಸ್ತೆ ಅಗಲೀಕರಣಕ್ಕಾಗಿ ಮುಲಾಜು ತೋರದೆ ತೆರವುಗೊಳಿಸುವಂತೆ ಆದೇಶ ನೀಡಿದೆ. ಹಳೆಯ ಪಿ.ಬಿ ರಸ್ತೆಯನ್ನು ಅನಧಿಕೃತವಾಗಿ ಒತ್ತುವರಿ ಮಾಡಿದವರನ್ನು ತೆರವುಗೊಳಿಸಲು ಯಾವುದೇ ಮುಲಾಜು ತೋರಬೇಡಿ ಎಂದು ಶಾಸಕ ಡಾ.ಎಂ.ಚಂದ್ರಪ್ಪ ಹೇಳಿದರು. ಚಳ್ಳಕೆರೆ ಹಾಗೂ ಹಿರಿಯೂರಿನಿಂದ ಚಿತ್ರದುರ್ಗ ನಗರ ಪ್ರವೇಶ ಮಾಡುವ ಪಿ.ಬಿ. ರಸ್ತೆ ಸರ್ಕಾರಿ ವಿಜ್ಞಾನ ಕಾಲೇಜಿನಿಂದ ಆಸ್ಪತ್ರೆಯವರೆಗೆ ಸಾಕಷ್ಟು ವಿಸ್ತಾರವಾಗಿದೆ. ಅದರೆ ನಗರದ ಮುಖ್ಯಭಾಗದಲ್ಲಿ ಒತ್ತುವಾರಿಯಾಗಿದೆ. ಇದಕ್ಕಿಂತ ಬೇರೆ ನಿದರ್ಶನ ಬೇಕಿಲ್ಲ. ಅಧಿಕಾರಿಗಳು ಒತ್ತುವರಿ ತೆರವಿಗೆ ಮುಂದಾಗಬೇಕು ಎಂದು ಶಾಸಕ ಟಿ.ರಘುಮೂರ್ತಿ ಹೇಳಿದರು. ದಾವಣಗೆರೆ ಮಹಾನಗರ ಪಾಲಿಕೆ ಒತ್ತುವರಿಯಾಗಿದ್ದ ಪಿ.ಬಿ.ರಸ್ತೆಯನ್ನು ತೆರವುಗಳಿಸಿ ಕ್ರಮ ಕೈಗೊಂಡಿದೆ. ಚಿತ್ರದುರ್ಗ ನಗರಸಭೆ ಅಧಿಕಾರಿಗಳು ದಾವಣಗೆರೆಗೆ ಭೇಟಿ ನೀಡಿ, ಮಾಹಿತಿ ಪಡೆದುಕೊಳ್ಳುವಂತೆ ವಿಧಾನಪರಿಷತ್ ಶಾಸಕ ಕೆ.ಎಸ್.ನವೀನ್ ಸಲಹೆ ನೀಡಿದರು. 1905ರಲ್ಲಿ ನಗರದ ಮುಖ್ಯರಸ್ತೆಯನ್ನು ರಾಷ್ಟ್ರೀಯ ಹೆದ್ದಾರಿ ಎಂದು ಗುರುತಿಸಲಾಗಿತ್ತು. ತದನಂತರ ಹೊಸ ರಾಷ್ಟ್ರೀಯ ಹೆದ್ದಾರಿ ನಿರ್ಮಾಣದ ನಂತರ ಇದನ್ನು ರಾಜ್ಯ ಹೆದ್ದಾರಿಯನ್ನಾಗಿ ಪರಿವರ್ತಿಸಲಾಗಿದೆ. ಆದರೆ ಹೆದ್ದಾರಿ ಅಗಲದ ಅಳತೆಯನ್ನು ಕಡಿಮೆ ಮಾಡಿಲ್ಲ. ಒತ್ತುವರಿಯಾದ ರಸ್ತೆಯನ್ನು ಅಧಿಕಾರಿಗಳು ಗುರುತಿಸಬೇಕು. ಇದರೊಂದಿಗೆ ನಗರದ ರಾಜಕಾಲುವೆ ಮೇಲಿನ ನಿರ್ಮಾಣಗಳ ತೆರವಿಗೂ ಮುಂದಾಗಬೇಕು ಎಂದು ಶಾಸಕ ಕೆ.ಸಿ.ವಿರೇಂದ್ರ ಪಪ್ಪಿ ಈ ಸಂದರ್ಭದಲ್ಲಿ ಹೇಳಿದರು.

### ಕ್ಷಯರೋಗದಿಂದ ಮುಕ್ತರಾಗಲು ಆರೋಗ್ಯ ಇಲಾಖೆಯೊಂದಿಗೆ ಸಹಕರಿಸಿ : ಗುರುಪ್ರಸಾದ್.




**ಚಳ್ಳಕೆರೆ:** ಇತ್ತೀಚಿನ ದಿನಗಳಲ್ಲಿ ಕ್ಷಯರೋಗ ಪೀಡಿತರಿಗೆ ಆರೋಗ್ಯ ಇಲಾಖೆ ಎಲ್ಲಾ ರೀತಿಯ ಚಿಕಿತ್ಸಾ ಸೌಲಭ್ಯಗಳನ್ನು ಕಲ್ಪಿಸುತ್ತಿದೆ. ವಿಶೇಷವಾಗಿ ಈ ಹಿಂದೆ ಜಿಲ್ಲಾಮಟ್ಟದಲ್ಲಿಯೇ ಈ ರೋಗ ನಿಯಂತ್ರಣಕ್ಕೆ ಔಷಧಿ ಪಡೆಯಬೇಕಿತ್ತು. ಆದರೆ, ಈಗ ಗ್ರಾಮದ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿಯೇ ವ್ಯವಸ್ಥೆ ಮಾಡಲಾಗಿದೆ. ಕ್ಷಯರೋಗದಿಂದ ಮುಕ್ತರಾಗಲು ಎಲ್ಲರೂ ಆರೋಗ್ಯ ಇಲಾಖೆಯೊಂದಿಗೆ ಸಹಕಾರ ನೀಡಬೇಕೆಂದು ಮೀರಸಾಬಿಹಳ್ಳಿ ಸರ್ಕಾರಿ ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿ ಗುರುಪ್ರಸಾದ್ ತಿಳಿಸಿದರು.

ಅವರು, ಸೋಮವಾರ ವಿಶ್ವಕ್ಷಯರೋಗ ದಿನಾಚರಣೆ ಅಂಗವಾಗಿ ಹಮ್ಮಿಕೊಂಡಿದ್ದ ಜಾಗೃತಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು. ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ತಾಲ್ಲೂಕು ಆರೋಗ್ಯಾಧಿಕಾರಿಗಳು, ಜಿಲ್ಲಾ ಕ್ಷಯರೋಗ ನಿಯಂತ್ರಣ ಮಂಡಳಿ ಸಹಕಾರದಿಂದ ಈ ಕಾರ್ಯಕ್ರಮ ಆಯೋಜಿಸಲಾಗಿತ್ತು. ಪ್ರಾಸ್ತಾವಿಕವಾಗಿ ಮಾತನಾಡಿದರು.

## ಪ್ರಮುಖ ಸುದ್ದಿ

# ತಾಪಮಾನ ಹೆಚ್ಚಳ: ಆರೋಗ್ಯ ಕಾಳಜಿ ವಹಿಸಿ



» ಚಿತ್ರದುರ್ಗ

ವಾತಾವರಣದಲ್ಲಿ ತಾಪಮಾನ ಹೆಚ್ಚಳವಾಗಿದ್ದು, ಸಾರ್ವಜನಿಕರು ಮುಂಜಾಗ್ರತಾ ಕ್ರಮಗಳನ್ನು ಕೈಗೊಂಡು ಆರೋಗ್ಯ ಕಾಳಜಿ ವಹಿಸಬೇಕು ಎಂದು ತಾಲ್ಲೂಕು ಆರೋಗ್ಯಾಧಿಕಾರಿ ಡಾ. ಬಿ.ವಿ. ಗಿರೀಶ್ ಹೇಳಿದರು.

ಚಿತ್ರದುರ್ಗ ತಾಲೂಕಿನ ಸಿರಿಗೆರೆ ಸಮುದಾಯ ಆರೋಗ್ಯ ಕೇಂದ್ರದ ಸಭಾಂಗಣದಲ್ಲಿ ಸೋಮವಾರದಂದು "ಬಿಸಿಲ ಬೇಗೆಗೆ ದೇಹದ ಬಗೆಗಿರಲಿ ವಿಶೇಷ ಕಾಳಜಿ" ಮಾಹಿತಿ ಶಿಕ್ಷಣ ಸಂವಹನ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಉಷ್ಣದ ಅಲೆ ದಿನದಿಂದ ದಿನಕ್ಕೆ ಏರುತ್ತಿದೆ ಸಾರ್ವಜನಿಕರು ಆರೋಗ್ಯ ಇಲಾಖೆಯು ನೀಡುವ ಮಾಹಿತಿಯನ್ನು ತಪ್ಪದೇ ಪಾಲಿಸಬೇಕು, ದೇಹದ ಬಗ್ಗೆ ವಿಶೇಷ ಕಾಳಜಿ ವಹಿಸಬೇಕು. ಮಧ್ಯಾಹ್ನ 12 ಗಂಟೆಯಿಂದ 3 ಗಂಟೆಯವರೆಗೆ ಬಿಸಿಲಿನಲ್ಲಿ ಹೋಗುವುದನ್ನು ಆದಷ್ಟು ತಪ್ಪಿಸಬೇಕು, ಅಲ್ಲದೆ ಮಧ್ಯಾಹ್ನದ ವೇಳೆ ಅಡುಗೆ ಮಾಡುವುದನ್ನು ಆದಷ್ಟು ಕೈಬಿಡಬೇಕು. ಮದ್ಯಪಾನ, ಚಹಾ, ಕಾಫಿ, ಕಾರ್ಬೋನೇಟ್ ಪಾನೀಯಗಳು ಅಥವಾ ಹೆಚ್ಚುಸಕ್ಕರೆಅಂಶ ಇರುವಪಾನೀಯಗಳನ್ನು ಸೇವಿಸಬಾರದು ಎಂದರು ತಾಲೂಕು ಆರೋಗ್ಯ ಶಿಕ್ಷಣಾಧಿಕಾರಿ ಮಂಜುನಾಥ್ ಮಾತನಾಡಿ, ಬೇಸಿಗೆಯಲ್ಲಿ ಬಸವಳಿದ ದೇಹಕ್ಕೆ ವಿಶ್ರಾಂತಿ ಅವಶ್ಯಕತೆ ಇರುತ್ತದೆ. ಹೆಚ್ಚು ನೀರಿನ ಅವಶ್ಯಕತೆ ಇರುತ್ತದೆ ಬಾಯಾರಿಕೆ ಇಲ್ಲದಿದ್ದರೂ ನೀರನ್ನು ಕುಡಿಯುತ್ತಿರುವುದು ಒಳ್ಳೆಯದು. ಪ್ರಯಾಣಿಸುವಾಗ ನೀರಿನ ಬಾಟಲಿ ಜೊತೆಗಿರಲಿ. ಅಡುಗೆ ಸಿದ್ದಪಡಿಸುವ ಪ್ರದೇಶದಲ್ಲಿ ಕಿಟಕಿ ಹಾಗೂ ಬಾಗಿಲು ತೆರೆದಿಡಬೇಕು. ಹಗುರ ಮತ್ತು ಸಡಿಲವಾದ ಹತ್ತಿಯ ಬಟ್ಟೆಯನ್ನು ಧರಿಸಬೇಕು. ಹೆಚ್ಚು ನೀರಿನ ಅಂಶವಿರುವ ಹಣ್ಣು ತರಕಾರಿಗಳನ್ನು ಸೇವಿಸಬೇಕು. ಬಿಸಿಲಿನಲ್ಲಿ ಹೊರಗಡೆ ಹೋಗುವುದು ಅನಿವಾರ್ಯವಾದರೆ, ಟೋಪಿ, ಕೊಡೆಯಿಂದ ರಕ್ಷಣೆ ಪಡೆದು ಬಿಸಿಲಿನಿಂದ ರಕ್ಷಿಸಿಕೊಳ್ಳಬೇಕು. ನಿಲ್ಲಿಸಿದ ವಾಹನಗಳ ಒಳಗೆ ಮಕ್ಕಳನ್ನು ಬಿಡಬಾರದು. ಎಳನೀರು, ಮಜ್ಜಿಗೆ, ಬೇಲದ ಹಣ್ಣಿನ ಪಾನಕ, ನಿಂಬೆಹಣ್ಣಿನ ಪಾಲಕ, ಹಸಿ ಸವತೆಕಾಯಿ ಹೆಚ್ಚು ಉಪಯೋಗಿಸಬೇಕು. ಯಾವುದೇ ತುರ್ತು ಪರಿಸ್ಥಿತಿಯನ್ನು ಎದುರಿಸಲು ಸಮುದಾಯ ಆರೋಗ್ಯ ಕೇಂದ್ರಕ್ಕೆ ಕರೆತರಬೇಕು ಎಂದರು. ಕಾರ್ಯಕ್ರಮದಲ್ಲಿ ಹಿರಿಯ ವೈದ್ಯಾಧಿಕಾರಿ ಡಾ. ತುಳಸಿ ರಂಗನಾಥ್, ವೈದ್ಯಾಧಿಕಾರಿ ಡಾ. ಶಿಲ್ಪ, ದಂತ ವೈದ್ಯ ಡಾ. ಬಿಂದ್ಯಾ, ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿಗಳಾದ ಬಿ, ಜಾನಕಿ. ಬಿ. ಮೂಗಪ್ಪ. ಫಾರ್ಮಸಿ ಅಧಿಕಾರಿ ಮೋಹನ್, ರಾಷ್ಟ್ರೀಯ ಕಿಶೋರಿ ಸ್ವಾಸ್ಥ್ಯ ಕಾರ್ಯಕ್ರಮದ ಕನ್ಸಲ್ಟೆಂಟ್ ಕಾವ್ಯ ಮಧುಸೂದನ, ಮಂಜುಳಾ ಪ್ರದೀಪ್, ಸಾರ್ವಜನಿಕರು ಉಪಸಿತರಿದ್ದರು.

# ಎಚ್ಚರಿಕೆ

## ಒಮ್ಮೆ ಯೋಚಿಸಿ ಮುಂದುವರಿಯಿರಿ.......



ಬದುಕಿನ ಪಯಣದಲ್ಲಿ ಇದೇ ಕೊನೆಯ ನಿಲ್ದಾಣವಲ್ಲ ಅಥವಾ ಇದೇ ಅಂತಿಮ ಸತ್ಯವಲ್ಲ.......

ಯೂಟ್ಯೂಬ್ ಮತ್ತು ಕೆಲವು ಸಾಮಾಜಿಕ ಜಾಲತಾಣಗಳು..........

ಮಾತು - ಅಭಿಪ್ರಾಯ - ಪ್ರಚೋದನೆ - ಪರಿಣಾಮ - ಸತ್ಯ - ವಾಸ್ತವ - ಭ್ರಮೆ - ಗೊಂದಲಗಳ ನಡುವೆ.........

ಸಮೂಹ ಸಂಪರ್ಕ ಮಾಧ್ಯಮಗಳ ಕ್ರಾಂತಿಯಿಂದ ಉಂಟಾಗುತ್ತಿರುವ ತಲ್ಲಣಗಳು ಒಂದೇ ಎರಡೇ....

ಅಬ್ಬಬ್ಬಾ ಎಷ್ಟೊಂದು ಜನರ ಎಂಥೆಂತ ಮಾತಿನ ತುಣುಕುಗಳು.....

ಊಟದಿಂದ ರೋಗಗಳ ವರೆಗೆ.....

ಹಾಗಾದರೆ ಭಾಷಣ ಅಥವಾ ಮಾತುಗಳು ಎಂಬುದು ಕಲೆಯೋ ? ಕೊಲೆಯೋ ?

ಕೆಲವರಿಗೆ ಅದು ಕಲೆಯ ಬಲೆಯಾದರೆ ಮತ್ತೆ ಕೆಲವರಿಗೆ ಕೊಲೆಯ ಬಲೆಯಾಗಿರುವುದನ್ನು ಗಮನಿಸಬಹುದು.

ಕೇಳುಗರು, ನೋಡುಗರು, ಪ್ರೇಕ್ಷಕರು, ಶ್ರೋತೃಗಳು, ವೀಕ್ಷಕರು, ಆಲಿಸುವವರು ಹೀಗೆ ನಾನಾ ಹೆಸರುಗಳಿಂದ ಕರೆಯಲಾಗುವ ಜನರನ್ನು ತಮ್ಮ ಮಾತುಗಳ ಮುಖಾಂತರ ಅವರ ಮನಸ್ಸುಗಳನ್ನು ಪ್ರವೇಶಿಸಿ ಅದರ ಮೇಲೆ ನಿಯಂತ್ರಣ ಸಾಧಿಸಿ ಹೇಳಬೇಕಾದ ವಿಷಯವನ್ನು ಸ್ಪಷ್ಟವಾಗಿ ಮತ್ತು ನೇರವಾಗಿ ತಮ್ಮ ಕ್ರಿಯಾತ್ಮಕ ಚಿಂತನೆಯಿಂದ ಅವರಲ್ಲಿ ಅಚ್ಚು ಹೊತ್ತಿದಂತೆ ಮೂಡಿಸಿ ಅವರನ್ನೂ ಯೋಚಿಸುವಂತೆ ಪ್ರೇರೇಪಿಸಿ ಅವರಲ್ಲಿ ಜ್ಞಾನದ ಬೆಳಕನ್ನು ಚೆಲ್ಲಿ ಅರಿವಿನ ಆಳ ಹೆಚ್ಚಿಸಿ ವೈಯಕ್ತಿಕವಾಗಿ ಮತ್ತು ಸಾಮಾಜಿಕವಾಗಿ ಅವರಲ್ಲಿ ಸ್ಪೂರ್ತಿ ತುಂಬಿ ಬದಲಾವಣೆಗೆ ಅವರನ್ನು ಸಜ್ಜುಗೊಳಿಸುವಂತೆ ಮಾಡುವ ಪ್ರತಿಭಾವಂತ ಪ್ರಾಮಾಣಿಕ ಭಾಷಣಕಾರರನ್ನು ನೋಡಿದ್ದೇವೆ ಮತ್ತು ಕೇಳಿದ್ದೇವೆ. ಇದನ್ನೇ ಅದ್ಭುತ ಭಾಷಣ ಕಲೆ ಎನ್ನಬಹುದು.




ಹಾಗೆಯೇ,

ತಮ್ಮ ಭಾಷಣಗಳಿಂದ ಜನರನ್ನು ಪ್ರಚೋದಿಸಿ, ಅವರುಗಳನ್ನು ಭಾವನಾತ್ಮಕವಾಗಿ ಉದ್ರೇಕಿಸಿ, ಪದಗಳು, ವಾಕ್ಯಗಳು, ಉದಾಹರಣೆಗಳು, ಸಂಕೇತಗಳು, ಅವಾಸ್ತವಿಕ ಅಂಶಗಳು, ಹೇಳುವ ಶೈಲಿಯ ಮುಖಾಂತರ ಅವರನ್ನು ವಂಚಿಸಿ, ಅವರಿಂದಲೇ ಸಮಾಜದಲ್ಲಿ ಅಶಾಂತಿ ಅಸಹನೆ ಸೃಷ್ಟಿಸಿ ದೊಂಬಿ ಗಲಭೆಗಳನ್ನು ಎಬ್ಬಿಸಿ ಜನರ ಮತ್ತು ಸಮಾಜದ ಸಾವು ನೋವುಗಳಿಗೆ ಕಾರಣವಾಗುವಂತ ಭಾಷಣಕಾರರನ್ನು ಸಹ ನಾವು ನೋಡುತ್ತಿದ್ದೇವೆ.

ಧಾರ್ಮಿಕ ಮತ್ತು ರಾಜಕೀಯ ನಾಯಕರುಗಳ ಜೊತೆಗೆ, ಕೆಲವು ನಕಲಿ ದೇಶ ಭಕ್ತರು ಮತ್ತು ನಕಲಿ ಬುದ್ದಿ ಜೀವಿಗಳು ಈ ರೀತಿಯ ಮಾತಿನ ಕಲೆಯನ್ನು ಕೊಲೆಯಾಗಿಸುವ ಸಾಮರ್ಥ್ಯ ಹೊಂದಿದ್ದಾರೆ.

ದೇವರ ಪ್ರತಿನಿಧಿಗಳಂತೆ, ಧರ್ಮಗಳ ವಕ್ತಾರರಂತೆ, ದೇಶದ ಉದ್ದಾರಕರಂತೆ,

ಜನಗಳ ರಕ್ಷಕರಂತೆ,

ಮಾತಿನಲ್ಲಿಯೇ ಅರಮನೆ ಕಟ್ಟಿ, ಸುಳ್ಳುಗಳ ಬಣ್ಣ ಹೊಡೆದು, ವಂಚನೆಯ ದೀಪ ಹಚ್ಚಿ ಜನರನ್ನು ಎಲ್ಲಾ ಕಾಲಕ್ಕೂ ಶೋಷಿಸಿಕೊಂಡು ಬರುತ್ತಿದ್ದಾರೆ.

ಕೇವಲ ಭಾಷಣಗಳಿಂದಲೇ ಅಧಿಕಾರಕ್ಕೇರುವ, ಆಶ್ವಾಸನೆಗಳಿಂದಲೇ ಅದನ್ನು ಉಳಿಸಿಕೊಳ್ಳುವ, ಮಾತುಗಳಿಂದಲೇ ಜನರನ್ನು ಮರುಳು ಮಾಡುವ ಹೃದಯಹೀನ ನಾಯಕ ವರ್ಗ ಸೃಷ್ಟಿಯಾಗಿದೆ.

ನಾವುಗಳು ಎಚ್ಚೆತ್ತುಕೊಳ್ಳದಿದ್ದರೆ, ಮಾತುಗಳೇ ಕಲೆಗೆ ಬದಲಾಗಿ ಕೊಲೆಗೆ ದಾರಿಯಾಗಿ ಮುಂದೆ ಹೃದಯದ ಭಾಷೆಯೇ ನಿರ್ನಾಮವಾಗಿ ಬುದ್ದಿಯ ಭಾಷೆ ತನ್ನ ನಿಯಂತ್ರಣ ಸಾಧಿಸಿ ನಮ್ಮನ್ನು ವಿನಾಶದ ಅಂಚಿಗೆ ತಳ್ಳುತ್ತದೆ.

ಗೆಳೆಯರೆ, ದಯವಿಟ್ಟು ಮಾತಿನ ಮೋಡಿಗಾರರ ಸೆಳೆತಕ್ಕೆ ಒಳಗಾಗದೆ, ನಿಜವಾದ ಕೆಲಸಗಾರರನ್ನು ಎಲ್ಲಾ ಕ್ಷೇತ್ರಗಳಲ್ಲೂ ಪ್ರೋತ್ಸಾಹಿಸೋಣ.

ಯೂಟ್ಯೂಬ್ ಗಳಲ್ಲಿ ಅಥವಾ ಬೇರೆ ಯಾವುದೇ ಮಾಧ್ಯಮಗಳಲ್ಲಿ ಕಾಣಸಿಗುವ ಮಾತಿನ ಮೋಡಿಯ ತುಣುಕುಗಳನ್ನು ನೋಡಿ ಕ್ಷಣಿಕ ಭಾವಕತೆಗೆ ಒಳಗಾಗಿ ಯಾವುದೇ ತೀರ್ಮಾನ ಕೈಗೊಳ್ಳಬೇಡಿ.

ವಿವೇಚನೆ ಮತ್ತು ಸ್ವತಂತ್ರ ತೀರ್ಮಾನ ನಿಮ್ಮದಾಗಿರಲಿ.

ಏಕೆಂದರೆ ಮಾತಿನ ಮೋಡಿಯಲ್ಲಿ ಸತ್ಯ ಸಮಾಧಿಯಾಗಿ ಸುಳ್ಳು ವಿಜೃಂಭಿಸಲು ಬಿಡಬಾರದು.

ಮುಂದಿನ ಪೀಳಿಗೆಯ ಮಕ್ಕಳಿಗೆ ಮಾತು ಮತ್ತು ಕೃತಿಗಳ ನಡುವಿನ ಅಂತರದ ಮಹತ್ವವನ್ನು ತಿಳಿ ಹೇಳುವ ಜವಾಬ್ದಾರಿ ನಮ್ಮದು. ಇಲ್ಲದಿದ್ದರೆ ಮಾತುಗಳೇ ಮಕ್ಕಳ ಭವಿಷ್ಯಕ್ಕೆ ಮುಳ್ಳಾಗುವ ಸಾಧ್ಯತೆ ಇದೆ......

ಒಳ್ಳೆಯದು - ಕೆಟ್ಟದ್ದು - ವಿಕೃತಗಳ ನಡುವಿನ ವ್ಯತ್ಯಾಸ ಗುರುತಿಸುವ ಸೂಕ್ಷ್ಮತೆ ನಮ್ಮದಾಗಲಿ.

ಇದನ್ನು ನಿಯಂತ್ರಿಸಲು - ನಿಗ್ರಹಿಸಲು ಸಾಧ್ಯವಿಲ್ಲ. ಆದರೆ ನಾವು ವಿವೇಚನೆ ಬೆಳೆಸಿಕೊಳ್ಳಲು ಸಾಧ್ಯವಿದೆ.

ಎಚ್ಚರವಿರಲಿ..........

ಪ್ರಬುದ್ಧ ಮನಸ್ಸು ಪ್ರಬುದ್ಧ ಸಮಾಜ,

ಜನರ ಜೀವನಮಟ್ಟ ಸುಧಾರಣೆಯ ಗುರಿಯೊಂದಿಗೆ,

ಮನಗಳಲ್ಲಿ - ಮನೆಗಳಲ್ಲಿ - ಮತಗಳಲ್ಲಿ - ಪರಿವರ್ತನೆಗಾಗಿ,



» ಲೇಖನ
ವಿವೇಕಾನಂದ. ಹೆಚ್.ಕೆ.
9844013068

## ಮೆದೆಹಳ್ಳಿ ಗ್ರಾಪಂನಿಂದ ಶಾಸಕ ಕೆ.ಸಿ.ವೀರೇಂದ್ರಪಪ್ಪಿಗೆ ಸನ್ಮಾನ



» **ಚಿತ್ರದುರ್ಗ**

ಮೆದೇಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಫ್ಲೋರೈಡ್ ಅಂಶ ಜಾಸ್ತಿಯಿದೆ ಎನ್ನುವುದನ್ನು ನನ್ನ ಗಮನಕ್ಕೆ ತಂದಿದ್ದೀರ. ಶೀಘ್ರವೇ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸಲಾಗುವುದೆಂದು ಶಾಸಕ ಕೆ.ಸಿ.ವೀರೇಂದ್ರಪಪ್ಪಿ ಭರವಸೆ ನೀಡಿದರು. ಮೆದೆಹಳ್ಳಿ ರಸ್ತೆಯಲ್ಲಿರುವ ಆದಿಶೇಷ ರೋಟರಿ ಭವನದಲ್ಲಿ ಚೈತನ್ಯ ಕ್ಷೇಮಾಭಿವೃದ್ದಿ ಸಂಘದಿಂದ ಭಾನುವಾರ ಸನ್ಮಾನ ಸ್ವೀಕರಿಸಿ ಮಾತನಾಡಿದರು. ನೀವುಗಳು ಮಾಡಿರುವ ಸನ್ಮಾನ ನನ್ನ ಜವಾಬ್ದಾರಿಯನ್ನು ಹೆಚ್ಚಿಸಿದೆ. ಮೆದಹಳ್ಳಿಯಲ್ಲಿ ಸಿ.ಸಿ.ರಸ್ತೆಗೆ ಎರಡು ಕೋಟಿ ರೂ.ಗಳನ್ನು ನೀಡಿದ್ದೇನೆ. ಮತ್ತೊಂದು ಕೋಟಿ ರೂ.ಗಳನ್ನು ಕೊಡುತ್ತೇನೆ. ಯು.ಜಿ.ಡಿ.ಸಮಸ್ಯೆ ಕೇವಲ ಮೆದೆಹಳ್ಳಿಯಲ್ಲಷ್ಟೆ ಇಲ್ಲ. ಇಡಿ ಚಿತ್ರದುರ್ಗದಲ್ಲಿ ಯು.ಜಿ.ಡಿ.ಸಮಸ್ಯೆಯಿದೆ. ಕಾಮಗಾರಿ ಕಳಪೆಯಾಗಿರುವುದರಿಂದ ರಿಪೇರಿ ಮಾಡಿಸಬಹುದೆಂದು ಹೇಳಿದರು.ನಿಗಮ ಮಂಡಳಿಗಳ ನೇಮಕದಲ್ಲಿ ಮೆದಹಳ್ಳಿಯವರಿಗೆ ಆದ್ಯತೆ ನೀಡಿದ್ದೇನೆ. ದೇವಸ್ಥಾನಕ್ಕೆ ಐದು ಲಕ್ಷ ರೂ.ಗಳನ್ನು ಕೊಟ್ಟಿದ್ದೇನೆ. ಎರಡು ಅಂಗನವಾಡಿಗಳನ್ನು ಕಟ್ಟಿಸಲಾಗಿದೆ.

## ಕ್ಷಯಕ್ಕೆ ಎದರದೇ ಚಿಕಿತ್ಸೆ ಪಡೆಯಲು ಸಲಹೆ

» **ದಾವಣಗೆರೆ**

ಟಿಬಿ, ಕ್ಷಯರೋಗ ಎಂದಾಕ್ಷಣ ಹೆದರುವ ಅವಶ್ಯಕತೆ ಇಲ್ಲ. ಬೇರೆ ರೋಗಗಳಂತೆ ಕ್ಷಯ ರೋಗವನ್ನು ಕೂಡ ಚಿಕಿತ್ಸೆ ಮೂಲಕ ಗುಣಪಡಿಸಬಹುದು ಎಂದು ಜಿಲ್ಲಾಧಿಕಾರಿ ಜಿ.ಎಂ. ಗಂಗಾಧರಸ್ವಾಮಿ ತಿಳಿಸಿದರು.

ಸೋಮವಾರ ನಗರದ ಕುವೆಂಪು ಕನ್ನಡ ಭವನದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ಕ್ಷಯ ರೋಗ ನಿರ್ಮೂಲನ ಕೇಂದ್ರದ ಸಂಯುಕ್ತಾಶ್ರಯದಲ್ಲಿಹಮ್ಮಿಕೊಂಡಿದ್ದ 'ವಿಶ್ವ ಕ್ಷಯ ರೋಗ ದಿನ' ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.



ಹಿಂದಿನ ದಿನಗಳಲ್ಲಿ ಕ್ಷಯರೋಗಕ್ಕೆ ತುತ್ತಾದವರನ್ನು ನೋಡುವ ರೀತಿಯೇ ಬೇರೆ ಇತ್ತು, ಆದರೆ ಪರಿಸ್ಥಿತಿ ಈಗ ಬದಲಾಗಿದೆ. ವೈದ್ಯಕೀಯ ಕ್ಷೇತ್ರ ಬೆಳೆದಿದ್ದು, ಸಾಕಷ್ಟು ಸುಧಾರಣೆಯಾಗಿದೆ. ಸುಧಾರಿತ ಔಷಧಿಗಳು, ಲಸಿಕೆಗಳು ಲಭ್ಯವಿದೆ. ಜನರಲ್ಲಿ ಸಾಕಷ್ಟು ಜಾಗೃತಿ ಮೂಡಿದೆ. ರೋಗ ಲಕ್ಷಣ ಕಂಡ ಕೂಡಲೇ ವೈದ್ಯರನ್ನು ಸಂಪರ್ಕಿಸಿ ಸೂಕ್ತ ಹಾಗೂ ನಿಯಮಿತ ಚಿಕಿತ್ಸೆ ಪಡೆದಲ್ಲಿ ಕ್ಷಯರೋಗದಿಂದ ಸಂಪೂರ್ಣವಾಗಿ ಗುಣಮುಖರಾಗಬಹುದು ಎಂದು ಹೇಳಿದರು.

ಕ್ಷಯದ ಲಕ್ಷಣ ಹಸಿವು ಇಂಗುವುದು, ಸುಸ್ತು, ತೂಕ ಇಳಿಕೆ ಕಂಡುಬಂದಾಗ ವೈದ್ಯರನ್ನು ಸಂಪರ್ಕಿಸಿದರೆ, ಮಾತ್ರೆಗಳ ಮೂಲಕವೇ ಮೂರರಿಂದ ಆರು ತಿಂಗಳೊಳಗೆ ಗುಣಪಡಿಸಬಹುದು. ರೋಗದ ಬಗ್ಗೆ ಅಲಕ್ಷ್ಯ ಸಲ್ಲದು. ಅಂಜಿಕೆ, ಭಯ ಬಿಟ್ಟು ಸಂಕೋಚವಿಲ್ಲದೆ ಮುಕ್ತವಾಗಿ ನಿಯಮಿತ ಚಿಕಿತ್ಸೆ ಪಡೆದು ಗುಣಮುಖರಾಗಬಹುದು. ಕ್ಷಯ ಮುಕ್ತ ಜಿಲ್ಲೆಯಾಗಿಸುವಲ್ಲಿ ಆಶಾ ಕಾರ್ಯಕರ್ತೆಯರು ಪ್ರಮುಖ ಪಾತ್ರ ವಹಿಸುತ್ತಿದ್ದು, ಅವರ ಸೇವೆ ಶ್ಲಾಘನೀಯ ಎಂದರು. ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಸುರೇಶ್ ಬಿ. ಇಟ್ನಾಳ್ ಮಾತನಾಡಿ, ಕ್ಷಯರೋಗ ನಿರ್ಮೂಲನೆ ಹಳ್ಳಿಗಳಿಂದ ಆಗಬೇಕು. ಈ ನಿಟ್ಟಿನಲ್ಲಿ ಹಳ್ಳಿಗಳಲ್ಲಿ ಕ್ಷಯರೋಗ ಪತ್ತೆ, ಸೂಕ್ತ ಸಮಯದಲ್ಲಿ ತಪಾಸಣೆ ಮತ್ತು ಚಿಕಿತ್ಸೆ ನೀಡುವುದರೊಂದಿಗೆ ಈ ರೋಗದ ಬಗ್ಗೆ ಸಾರ್ವಜನಿಕರಲ್ಲಿ ಅರಿವು ಮೂಡಿಸಲು ಪರಿಣಾಮಕಾರಿ ಕ್ರಮ ಜರುಗಿಸಬೇಕೆಂದರು.

ಈ ದಿನ ಜಿಲ್ಲೆಯ 40 ಗ್ರಾಮ ಪಂಚಾಯತ್‌ಗಳು ಕ್ಷಯ ಮುಕ್ತ ಗ್ರಾಮ ಪಂಚಾಯಿತಿಗಳಾಗಿವೆ. ಇದಕ್ಕೆ ಶ್ರಮವಹಿಸಿದ ಗ್ರಾಮ ಪಂಚಾಯತ್ ಸದಸ್ಯರು, ಪಿಡಿಓ ಹಾಗೂ ಪ್ರಾಥಮಿಕ ಆರೋಗ್ಯ ಕೇಂದ್ರಗಳ ವೈದ್ಯಾಧಿಕಾರಿಗಳಿಗೂ ಅಭಿನಂದನೆ ಸಲ್ಲಿಸುತ್ತೇನೆ ಎಂದರು.

ಜಿಲ್ಲೆಯಲ್ಲಿ ಕ್ಷಯ ರೋಗದಿಂದಾಗಿ ಘಟಿಸಿದ ಸಾವಿನ ಪ್ರಮಾಣ ಶೇ.11ರಷ್ಟು ಇತ್ತು. ಅದನ್ನು ಶೇ.5 ಕ್ಕೆ ಇಳಿಸುವ ಗುರಿ ನಮ್ಮದಾಗಿತ್ತು. ನಮ್ಮ ಗ್ರಾಮ ಪಂಚಾಯತ್, ನಗರ ಸ್ಥಳೀಯ ಸಂಸ್ಥೆಗಳು, ಅಧಿಕಾರಿ ವರ್ಗ ಹಾಗೂ ಸಮುದಾಯದ ಸಂಘಟಿತ ಪ್ರಯತ್ನದ ಫಲವಾಗಿ ಶೇ.7 ತಂದಿದ್ದೇವೆ. ಕಾರಣ ಕೆಲ ಪ್ರಕರಣಗಳಲ್ಲಿ ರೋಗ ಕೊನೆಯಹಂತದಲ್ಲಿದ್ದಾಗಪತ್ತೆಯಾಗುತ್ತಿದೆ, ಸ್ವಲ್ಪ ಆರಂಭದಲ್ಲೇ ಪತ್ತೆಯಾದರೆ ಸಾವಿನ ಪ್ರಮಾಣ ಇನ್ನೂ ಇಳಿಕೆಯಾಗಲಿದೆ. ಇದಕ್ಕೆ ಸಂಘಟಿತ ಪ್ರಯತ್ನ ಮಾಡಬೇಕಿದೆ ಎಂದು ಹೇಳಿದರು.

ಆರಂಭದಲ್ಲಿ ಜಿಲ್ಲಾ ಕ್ಷಯರೋಗ ನಿರ್ಮೂಲನಾಧಿಕಾರಿ ಡಾ. ಪಿ.ಡಿ. ಮುರಳೀಧರ್ ತಮ್ಮ ಪ್ರಾಸ್ತಾವಿಕ ನುಡಿಗಳನ್ನಾಡಿ, ಕ್ಷಯ ರೋಗವನ್ನು ಎಷ್ಟು ಬೇಗ ಪತ್ತೆ ಹಚ್ಚುತ್ತೇವೆಯೋ ಅಷ್ಟು ಬೇಗ ವಾಸಿ ಮಾಡಬಹುದು. ತಾಲ್ಲೂಕು, ಜಿಲ್ಲಾಸ್ಪತ್ರೆಗಳಲ್ಲಿ ಕ್ಷಯ ರೋಗ ಕಂಡುಹಿಡಿಯುವ ನ್ಯಾಟ್ ಮಿಷನ್‌ಗಳು ಲಭ್ಯವಿದೆ. ಜಿಲ್ಲಾ ಪಂಚಾಯತ್ ನಿಂದ ಒಂದು ಕೋಟಿ ಅನುದಾನ ನೀಡಿ, ಹೆಚ್ಚಿನ ಯಂತ್ರಗಳನ್ನು ಖರೀದಿಸಲು ಅವಕಾಶ ಮಾಡಿಕೊಡಲಾಗಿದೆ. ಸುಯೇಜ್ ಹಾಗೂ ಜೆಎಸ್‌ಡಬ್ಲ್ಯೂ ಸಂಸ್ಥೆಗಳು ಫುಡ್ ಕಿಟ್ ಗಳನ್ನು ನೀಡಿದ್ದಾರೆ ಎಂದರು.

ಕ್ಷಯ ಮುಕ್ತ 40 ಗ್ರಾಮ ಪಂಚಾಯಿತಿಗಳ ಅಧ್ಯಕ್ಷರು, ಪಿಡಿಓ ಹಾಗೂ ವೈದ್ಯಾಧಿಕಾರಿಗಳನ್ನು ವೇದಿಕೆಗೆ ಆಹ್ವಾನಿಸಿ, ಪ್ರಶಸ್ತಿ ಪತ್ರ ಹಾಗೂ ಸ್ಮರಣಿಕೆ ನೀಡಿ ಗೌರವಿಸಲಾಯಿತು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ. ಎಸ್. ಷಣ್ಮುಖಪ್ಪ, ಜಿಲ್ಲಾ ಸರ್ಜನ್ ಡಾ. ಎಂ.ಬಿ. ನಾಗೇಂದ್ರಪ್ಪ, ಡಾ. ಅಸ್ಮಾ ಬಾನು, ಡಾ. ಎಸ್.ಪಿ. ಮಧು, ಡಾ. ಯೋಗೇಂದ್ರ ಕುಮಾರ್, ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ. ಜಿ.ಡಿ. ರಾಘವನ್, ಡಾ. ಎಂ.ಕೆ. ರುದ್ರಸ್ವಾಮಿ, ಡಾ. ಸುರೇಶ್ ಬಾರ್ಕಿ ಇನ್ನಿತರರು ಉಪಸ್ಥಿತರಿದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T